ನಮ್ಮ ಜನ
NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 ಸಂಚಿಕೆ – 91 ಶೀರ್ಷಿಕೆ ಕೋಡ್: ಕೆಎಆರ್ ಕೆಎನ್ 28269 ಚಿತ್ರದುರ್ಗ ದಿನಾಂಕ: 17–10–2023 ಮಂಗಳವಾರ ಪುಟ: 4 ಬೆಲೆ : ರೂ.2–00
Volume - 01 Issue - 91 Title- Code: KARKAN 28269 Chitradurga Date: 17-10-2023 Tuesday Page: 4 Price: Rs. 2-00

ಒಳಪುಟದ ಸುದ್ದಿಗಳು
ಅ.17 ರಂದು ಶಾದಿಮಹಲ್ ಭವನ ನೂತನ ಕಟ್ಟಡದ ಶಂಕುಸ್ಥಾಪನೆ 2
ಗ್ರಾಮಗಳಲ್ಲಿ ಮಕ್ಕಳ ಕಾವಲು ಸಮಿತಿ ರಚಿಸಿ ತಪ್ಪದೇ ಸಭೆ ನಡೆಸಿ 3
ವಿದ್ಯಾರ್ಹತೆಯೊಂದಿಗೆ ವೃತ್ತಿ ನೈಪುಣ್ಯತೆ ಅಗತ್ಯ 4
ಸುದ್ದಿ, ಜಾಹಿರಾತಿಗೆ 9686622252

ಫಾಸ್ಟ್ ನ್ಯೂಸ್

ಇಂದು ವಿಶೇಷ ತರಬೇತಿ

» ಚಿತ್ರದುರ್ಗ

ರಾಜ್ಯ ಸಹಕಾರ ಮಹಾ ಮಂಡಳಿ ನಿಯಮಿತ, ಜಿಲ್ಲಾ ಸಹಕಾರ ಯೂನಿಯನ್ ಸಂಯುಕ್ತ ಆಶ್ರಯದಲ್ಲಿ ಚಿತ್ರದುರ್ಗ ಮತ್ತು ಹೊಸದುರ್ಗ ತಾಲ್ಲೂಕಿನ ಪತ್ತಿನ ಮತ್ತು ನೌಕರರ ಪತ್ತಿನ ಸಹಕಾರ ಸಂಘಗಳ ಅಧ್ಯಕ್ಷರು, ಉಪಾಧ್ಯಕ್ಷರು, ಆಡಳಿತ ಮಂಡಳಿಯ ನಿರ್ದೇಶಕರು ಹಾಗೂ ವ್ಯವಸ್ಥಾಪಕರಿಗೆ ಒಂದು ದಿನದ ವಿಶೇಷ ತರಬೇತಿ ಕಾರ್ಯಕ್ರಮವನ್ನು ಅಕ್ಟೋಬರ್ 17 ರಂದು ಬೆಳಿಗ್ಗೆ 10 ಗಂಟೆಗೆ ನಗರದ ಸಹಕಾರ ಭವನ ಸಭಾಂಗಣದಲ್ಲಿ ಹಮ್ಮಿಕೊಳ್ಳಲಾಗಿದೆ.ಹಾಗೂ ರಾಜ್ಯ ಸಹಕಾರ ಮಹಾಮಂಡಳ ನಿರ್ದೇಶಕ ಹಾಗೂ ಸಹಕಾರ ರತ್ನ ಪುರಸ್ಕೃತ ಆರ್. ರಾಮರೆಡ್ಡಿ ಕಾರ್ಯಕ್ರಮ ಉದ್ಘಾಟಿಸುವರು. ಜಿಲ್ಲಾ ಸಹಕಾರ ಯೂನಿಯನ್ ಅಧ್ಯಕ್ಷ ಜೆ.ಶಿವಪ್ರಕಾಶ್ ಅಧ್ಯಕ್ಷತೆ ವಹಿಸುವರು. ಮುಖ್ಯ ಅತಿಥಿಗಳಾಗಿ ಸಹಕಾರ ರತ್ನ ಪುರಸ್ಕೃತರು ಹಾಗೂ ಕರ್ನಾಟಕ ರಾಜ್ಯ ಸಹಕಾರ ಮಾರಾಟ ಮಹಾ ಮಂಡಳ ನಿರ್ದೇಶಕ ಎಸ್. ಆರ್.ಗಿರೀಶ್, ಜಿಲ್ಲಾ ಸಹಕಾರ ಯೂನಿಯನ್ ಉಪಾಧ್ಯಕ್ಷೆ ಮಾತೃಶ್ರೀ ಎನ್. ಮಂಜುನಾಥ್, ಜಿಲ್ಲಾ ಸಹಕಾರ ಯೂನಿಯನ್ ನಿರ್ದೇಶರಕ, ಸಹಕಾರ ರತ್ನ ಪುರಸ್ಕೃತರ ಜಿಂಕಲ್ ಬಸವರಾಜ್, ಇತರೆ ನಿರ್ದೇಶಕರುಗಳಾದ ಹೆಚ್.ಎನ್.ತಿಪ್ಪೇಸ್ವಾಮಿ, ಜಿ.ಈ.ಅಜ್ಜಪ್ಪ ಬಿ.ಸಿ. ಸಂಜೀವಮೂರ್ತಿ, ಹೆಚ್. ಎಂ. ದ್ಯಾಮಣ್ಣ, ಹೆಚ್.ವಿ. ಪ್ರತಾಪಸಿಂಹ, ಕೆ.ಹೆಚ್. ಜಗನ್ನಾಥ್, ರತ್ನಮ್ಮ, ಟಿ. ಮಹಾಂತೇಶ್ ಭಾಗವಹಿಸುವರು.ವಿಶೇಷ ಆಹ್ವಾನಿತರಾಗಿ ಜಿಲ್ಲಾ ಸಹಕಾರ ಕೇಂದ್ರ ಬ್ಯಾಂಕ್ ವ್ಯವಸ್ಥಾಪಕ ನಿರ್ದೇಶಕ ಇಲ್ಯಾಸ ಉಲ್ಲಾ ಷರೀಫ್, ಸಹಕಾರ ಸಂಘಗಳ ಲೆಕ್ಕಪರಿಶೋಧನಾ ಇಲಾಖೆ ಉಪನಿರ್ದೇಶಕ ಕೆ. ಮಹೇಶ್ವರಪ್ಪ, ಸಹಕಾರ ಸಂಘಗಳ ಉಪನಿಬಂಧಕ ಟಿ. ಮಧು ಶ್ರೀನಿವಾಸ್, ಸಹಕಾರ ಸಂಘಗಳ ಲೆಕ್ಕಪರಿಶೋಧನಾ ಇಲಾಖೆ ಸಹಾಯಕ ನಿರ್ದೇಶಕ ಪಿ. ಅಂಜನಮೂರ್ತಿ, ಸಹಕಾರ ಅಭಿವೃದ್ಧಿ ಅಧಿಕಾರಿಗಳಾದ ಕೆ.ಕೃಷ್ಣಮೂರ್ತಿ, ಕೆ.ಸುಮಿತ್ರ ಭಾಗವಹಿಸುವರು.ಕಾರ್ಯಕ್ರಮದಲ್ಲಿ ಸಹಕಾರ ಸಂಘಗಳ ಸಾಲ ವಸೂಲಾತಿ, ತಿದ್ದುಪಡಿಯಾದ ಕಾಯ್ದೆಯ ಕಾನೂನಿನ ಅಂಶಗಳು, ಸಹಕಾರ ಸಂಘಗಳ ಚುನಾವಣೆ ಕುರಿತು ಉಪನ್ಯಾಸವಿರಲಿದೆ ಎಂದು ಜಿಲ್ಲಾ ಸಹಕಾರ ಯೂನಿಯನ್ ಮುಖ್ಯ ಕಾರ್ಯನಿರ್ವಾಹಣಾಧಿಕಾರಿ ನಾಗರಾಜ ಪಾಟೀಲ್ ತಿಳಿಸಿದ್ದಾರೆ.

ಗಾಂಜಾ ಸಾಗಣೆ ನಾಲ್ವರು ಬಂಧನ: ಗಾಂಜಾ ವಶ

» ಚಿತ್ರದುರ್ಗ

ಅಬಕಾರಿ ಇಲಾಖೆ ಅಧಿಕಾರಿಗಳು ಅಕ್ರಮ ಗಾಂಜಾ ಸಾಗಣೆಕೆ ಮಾಡುತ್ತಿದ್ದ 2 ಪ್ರತ್ಯೇಕ ಪ್ರಕರಣಗಳನ್ನು ಭೇಧಿಸಿ, ನಾಲ್ವರು ಆರೋಪಿಗಳನ್ನು ಬಂಧಿಸಿ 2 ಕೆ.ಜಿ. ಗಾಂಜಾ ವಶಪಡಿಸಿಕೊಂಡಿದ್ದಾರೆ. ಅಕ್ಟೋಬರ್ 10 ರಂದು ಹಿರಿಯೂರು ತಾಲೂಕು ಗಾರೇದಿಂಡು ರಸ್ತೆಯಲ್ಲಿ ಮಧ್ಯಾಹ್ನ 2:30 ಸಮಯದಲ್ಲಿ ದ್ವಿಚಕ್ರ ವಾಹನದಲ್ಲಿ ಅಕ್ರಮ ಗಾಂಜಾ ಸಾಗಣೆ ಮಾಡುತ್ತಿದ್ದ ಕಂದಿಕೆರೆ ಗ್ರಾಮದ ಯಶವಂತ, ಹಿರಿಯೂರು ಪಟ್ಟಣದ ಭರತ್.ಹೆಚ್.ಎನ್. ಅವರನ್ನು ಬಂಧಿಸಿ 300 ಗ್ರಾಂ ಗಾಂಜಾ ವಶಪಡಿಸಿಕೊಳ್ಳಲಾಗಿದೆ. ಕಾರ್ಯಾಚರಣೆಯಲ್ಲಿ ಅಬಕಾರಿ ನಿರೀಕ್ಷಕಿ ವನಿತಾ.ಎ, ಉಪ ನಿರೀಕ್ಷಕ ನಾಗರಾಜ, ಅಬಕಾರಿ ಕಾನ್ಸ್‌ಟೇಬಲ್ ರಾಮಾಂಜನೇಯ, ವಾಹನ ಚಾಲಕ ನಾಗರಾಜ.ಕೆ.ತೋಳಮಟ್ಟಿ ಪಾಲ್ಗೊಂಡಿದ್ದರು. ಸಂಜೆ 7:30ಕ್ಕೆ ಮೊಳಕಾಲ್ಮೂರು ತಾಲೂಕಿನ ವೆಂಕಟಾಪುರ ಗ್ರಾಮದ ಹಡಗಿಲಿ ಬಳಿ ದ್ವಿಚಕ್ರ ವಾಹನದಲ್ಲಿ ಅಕ್ರಮ ಗಾಂಜಾ ಸಾಗಣೆ ಮಾಡುತ್ತಿದ್ದ, ಆಂದ್ರ ಪ್ರದೇಶದ ರಾಯದುರ್ಗ ತಾಲ್ಲೂಕಿನ ಮಲ್ಲಪ್ಪ, ಗೊಲ್ಲ ಕೆಂಜಂಡಪ್ಪ ಅವರನ್ನು ಬಂಧಿಸಿ 1726 ಗ್ರಾಂ ಗಾಂಜಾ ವಶಪಡಿಸಿಕೊಳ್ಳಾಗಿದೆ. ಕಾರ್ಯಾಚರಣೆಯಲ್ಲಿ ಜಿಲ್ಲಾ ವಿಚಕ್ಷಣಾ ದಳದ ಅಬಕಾರಿ ಉಪನಿರೀಕ್ಷಕ ಸಿದ್ದೇಶ್ ನಾಯ್ಕ್.ಕೆ, ಅಬಕಾರಿ ಕಾನ್ಸ್‌ಟೇಬಲ್ ಬಸವರಾಜ.ಜೆ, ವಾಹನ ಚಾಲಕ ಎಸ್.ತಿಪ್ಪೆಸ್ವಾಮಿ ಪಾಲ್ಗೊಂಡಿದ್ದರು.

ಸದರಿ ಪ್ರಕರಣಗಳಲ್ಲಿ ಆರೋಪಿಗಳ ವೈದ್ಯಕೀಯ ತಪಾಸಣೆ ಮಾಡಿ, ಎನ್.ಡಿ.ಪಿ.ಎಸ್(ನಾರ್ಕೋಟಿಕ್ ಡ್ರಗ್ಸ್ ಅಂಡ್ ಸೈಕೋಟ್ರೋಪಿಕ್ ಸಬ್‌ಸ್ಟೆನ್ಸ್) ಕಾಯ್ದೆ ಅನುಸಾರ ಪ್ರಕರಣ ದಾಖಲಿಸಲಾಗಿದೆ. ಕೃತ್ಯಕ್ಕೆ ಬಳಸಿದ ದ್ವಿಚಕ್ರ ವಾಹನಗಳನ್ನು ಜಪ್ತಿ ಮಾಡಲಾಗಿದೆ.

ಕಾಂಗ್ರೆಸ್ ಸರ್ಕಾರದ ವಿರುದ್ಧ ಸಿ.ಟಿ.ರವಿ ವಾಗ್ದಾಳಿ

ಪಂಚಾಯಿತಿಗೊಂದು ಬಾರ್, ಪಂಚೆಗೊಂದು ಕ್ವಾಟರ್ ಕೊಡಲು ಹೊರಟ ರಾಜ್ಯ ಸರ್ಕಾರ

» ಚಿತ್ರದುರ್ಗ



ಪಂಚಾಯಿತಿಗೊಂದು ಬಾರ್, ಪಂಚೆಗೊಂದು ಕ್ವಾಟರ್ ಕೊಡಲು ಹೊರಟಿರುವ ರಾಜ್ಯ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದು ನಾಲ್ಕೆ ತಿಂಗಳಲ್ಲಿ ದಿವಾಳಿಯತ್ತ ಸಾಗುತ್ತಿದೆ ಎಂದು ಬಿಜೆಪಿ. ರಾಷ್ಟ್ರೀಯ ಮಾಜಿ ಪ್ರಧಾನ ಕಾರ್ಯದರ್ಶಿ ಸಿ.ಟಿ.ರವಿ ವ್ಯಂಗ್ಯವಾಡಿದರು.

ರಾಜ್ಯ ಕಾಂಗ್ರೆಸ್ ಸರ್ಕಾರದ ಭ್ರಷ್ಟಾಚಾರ ವಿರುದ್ಧ ರಾಜ್ಯಾದ್ಯಂತ ಬಿಜೆಪಿ.ಯಿಂದ ಸೋಮವಾರ ಹಮ್ಮಿಕೊಳ್ಳಲಾಗಿದ್ದ ಧರಣಿಯ ಹಿನ್ನೆಲೆಯಲ್ಲಿ ಒನಕೆ ಓಬವ್ವ ವೃತ್ತದಲ್ಲಿ ನಡೆದ ಪ್ರತಿಭಟನೆಯಲ್ಲಿ ಭಾಗವಹಿಸಿ ಮಾತನಾಡಿದರು.

ಅಧಿಕಾರಉಳಿಸಿಕೊಳ್ಳಲುಕಚ್ಚಾಡುತ್ತಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಇವರುಗಳ ಕಾಟಕ್ಕೆ ರಾಜ್ಯದಲ್ಲಿ ರೈತರು, ಗುತ್ತಿಗೆದಾರರು ಬದುಕುವಂತಿಲ್ಲ. ಈಗಾಗಲೆ ನೂರಕ್ಕೂ ಹೆಚ್ಚು ರೈತರು ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ಇದ್ಯಾವುದನ್ನು ಲೆಕ್ಕಿಸದ ರಾಜ್ಯ ಸರ್ಕಾರ ಅಕ್ರಮವಾಗಿ ಹಣ ಸಂಗ್ರಹಿಸಿ ಪಂಚ ರಾಜ್ಯಗಳಲ್ಲಿ ನಡೆಯುವ ವಿಧಾನಸಭೆ ಚುನಾವಣೆಗೆ ರವಾನಿಸಲು ಹೊರಟಿದೆ. ಮಾಜಿ ಕಾರ್ಪೊರೇಟರ್ ಪತಿ ಅಂಬಿಕಾಪತಿಯವರ ಮನೆಯಲ್ಲಿ ಹಾಗೂ ಗುತ್ತಿಗೆದಾರರೊಬ್ಬರ ಮನೆಯಲ್ಲಿ ಸಿಕ್ಕಿರುವ ಕಂತೆ ಕಂತೆ ಹಣ ಯಾರದ್ದು, ಇದಕ್ಕೆ ಹೊಣೆಗಾರರು ಯಾರು ಎನ್ನುವುದನ್ನು ಕಾಂಗ್ರೆ□□ನವರೆ ಬಹಿರಂಗಪಡಿಸಬೇಕು ಎಂದು ಕಿಡಿಕಾರಿದರು.

ಮೈಸೂರಿನಲ್ಲಿ ನಡೆದ ಸಾಂಸ್ಕೃತಿಕ ಕಾರ್ಯಕ್ರಮದಲ್ಲಿ ಹಣ ಲೂಟಿ ಹೊಡೆದಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ಬೆಂಗಳೂರು ಹಾಗೂ ಸುತ್ತಮುತ್ತಲ ಪ್ರದೇಶಗಳಲ್ಲಿ ನಿರ್ಮಿಸುವ ಅಪಾ□□□□ಮೆಂ□□ಗಳಲ್ಲಿ ಇಂತಿಷ್ಟು ಹಣ ನಿಗಧಿಪಡಿಸಿ ಸಂಗ್ರಹಣೆಯಲ್ಲಿ ತೊಡಗಿರುವುದು ನಿಜಕ್ಕೂ ನಾಚಿಕೆಗೇಡಿನ ಸಂಗತಿ. ಮಾತೆತ್ತಿದರೆ ಪ್ರಧಾನಿ ಮೋದಿ ಕಡೆ ಕೈತೋರಿಸಿ ತಮ್ಮ ತಪ್ಪುಗಳನ್ನು ಮುಚ್ಚಿಕೊಳ್ಳುವ ಪರಿಪಾಠ ಬೆಳೆಸಿಕೊಂಡಿದ್ದಾರೆ. ರಾಜ್ಯದಲ್ಲಿ ನಮ್ಮ ಸರ್ಕಾರ ಅಧಿಕಾರದಲ್ಲಿದ್ದಾಗ ಜಾರಿಗೆ ತಂದ ಯೋಜನೆಗಳನ್ನು ಬಿಟ್ಟರೆ ಕಾಂಗ್ರೆಸ್ ಯಾವುದೇ ಹೊಸ ಕಾಮಗಾರಿಗಳನ್ನು ಆರಂಭಿಸಿಲ್ಲ. ಇಂತಹ ಭ್ರಷ್ಟ ಸರ್ಕಾರಕ್ಕೆ ರಾಜ್ಯದ ಜನ ತಕ್ಕಪಾಠ ಕಲಿಸಲಿದ್ದಾರೆಂದು ಎಚ್ಚರಿಸಿದರು.

ಕೇಂದ್ರ ಸಚಿವ ಎ.ನಾರಾಯಣಸ್ವಾಮಿ ಮಾತನಾಡಿ ರಾಜ್ಯದಲ್ಲಿ ಕುರ್ಚಿ ಉಳಿಸಿಕೊಳ್ಳುವ ಪೈಪೋಟಿಯಲ್ಲಿ ತೊಡಗಿರುವ ಮುಖ್ಯಮಂತ್ರಿ ಹಾಗೂ ಉಪಮುಖ್ಯಮಂತ್ರಿ ಇವರುಗಳಿಂದ ರಾಜ್ಯಕ್ಕೆ ಏನೂ ಉಪಯೋಗವಿಲ್ಲ. ಭದ್ರಾಮೇಲ್ದಂಡೆ ಯೋಜನೆಗಾಗಿ ನಮ್ಮ ಸರ್ಕಾರ 5300 ಕೋಟಿ ರೂ. ಗಳನ್ನು ಘೋಷಿಸಿದೆ. ಬಿಡುಗಡೆಯೂ ಮಾಡುತ್ತದೆ. ಆದರೆ ನೀವುಗಳು ಕಮಿಷನ್ ಹೊಡೆಯಲು ಕಾಯುತ್ತೀದ್ದೀರ ಎಂದು ಖಾರವಾಗಿ ಪ್ರಶ್ನಿಸಿದರು?

ತುಮಕೂರು, ಚಿತ್ರದುರ್ಗ, ದಾವಣಗೆರೆ ನೇರ ರೈಲು ಮಾರ್ಗ ಯೋಜನೆಗೂ ಹಣ ಬಿಡುಡೆಯಾಗಿಲ್ಲ. ದಲಿತರಿಗಾಗಿ ಮೀಸಲಿಟ್ಟಿದ್ದ ಹನ್ನೊಂದುವರೆ ಸಾವಿರ ಕೋಟಿ ರೂ.ಗಳನ್ನು ಬೇರೆ ಉದ್ದೇಶಕ್ಕೆ ಬಳಸಿರುವುದು ಯಾವ ಪುರುಷಾರ್ಥಕ್ಕಾಗಿ ದಲಿತರ ಮತಗಳನ್ನು ಸೆಳೆಯಲು ಹೊರಟಿದ್ದೀರ ರಾಜ್ಯದ ಜನ ನಿಮ್ಮನ್ನು ಕ್ಷಮಿಸುವುದಿಲ್ಲ. ಪ್ರಧಾನಿ ಮೋದಿ ಬಗ್ಗೆ ಹಗುರವಾಗಿ ಮಾತನಾಡುವುದನ್ನು ಬಿಟ್ಟು ರಾಜ್ಯದ ಅಭಿವೃದ್ಧಿ ಕಡೆ ಗಮನ ಕೊಡಿ. ಕತ್ತಲೆ ಭಾಗ್ಯದಿಂದ ಜನರಿಗೆ ಮುಕ್ತಿ ಯಾವಾಗ ಎಂದು ಕೇಳಿದರು.

ಮಾಜಿ ಶಾಸಕ ಜಿ.ಹೆಚ್.ತಿಪ್ಪಾರೆಡ್ಡಿ ಮಾತನಾಡುತ್ತ ಪಂಚ ರಾಜ್ಯಗಳಲ್ಲಿ ನಡೆಯುವ ವಿಧಾನಸಭೆ ಚುನಾವಣೆಗೆ ಹಣ ಸಂಗ್ರಹಿಸಲು ಹೊರಟಿರುವ ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಇವರುಗಳಿಂದ ಜನ ಯಾವ ಅಭಿವೃದ್ಧಿಯನ್ನು ನಿರೀಕ್ಷಿಸಲು ಸಾಧ್ಯವಿಲ್ಲ. ಚುನಾವಣೆ ಪೂರ್ವದಲ್ಲಿಯೇ ಉಚಿತ ಗ್ಯಾರೆಂಟಿಗಳನ್ನು ಘೋಷಿಸಿ ಅಧಿಕಾರಕ್ಕೆ ಬಂದ ಕಾಂಗ್ರೆಸ್ ರೈತರಿಗೆ ಗುಣಮಟ್ಟದ ವಿದ್ಯುತ್ ನೀಡುತ್ತಿಲ್ಲ. ಬೆಂಗಳೂರಿನಲ್ಲಿ ಮಾಜಿ ಕಾರ್ಪೊರೇಟರ್ ಹಾಗೂ ಗುತ್ತಿಗೆದಾರರೊಬ್ಬರ ಮನೆಯಲ್ಲಿ ಕೋಟಿಗಟ್ಟಲೆ ಹಣ ಸಿಕ್ಕಿರುವುದು ಯಾರಿಗೆ ಸೇರಿದ್ದು ಎನ್ನುವುದು ತನಿಖೆಯಾಗಬೇಕಿದೆ. ರಾಜ್ಯದಲ್ಲಿ ಬಿಜೆಪಿ.ಸರ್ಕಾರ ಅಧಿಕಾರದಲ್ಲಿದ್ದಾಗ ಜಾರಿಗೆ ತಂದ ಯೋಜನೆಗಳನ್ನು ಉದ್ಘಾಟಿಸುತ್ತಿರುವ ಕಾಂಗ್ರೆ□□ನವರು ಉಚಿತ ಭಾಗ್ಯಗಳಿಗೆ ಹಣ ಹೊಂದಿಸಲು ಆಗದೆ ಪರದಾಡುತ್ತಿದ್ದಾರೆಂದು ಟೀಕಿಸಿದರು.ವಿಧಾನಪರಿಷತ್ ಸದಸ್ಯ ಕೆ.ಎಸ್.ನವೀನ್ ಮಾತನಾಡಿ ತಮಿಳುನಾಡಿನ ಮುಖ್ಯಮಂತ್ರಿ ಸ್ಟಾಲಿನ್ ಹಾಗೂ ಸೋನಿಯಾಗಾಂಧಿಯನ್ನು ಖುಷಿಪಡಿಸುವುದಕ್ಕಾಗಿ ರಾಜ್ಯ ಸರ್ಕಾರ ರಾತ್ರೋರಾತ್ರಿ ತಮಿಳುನಾಡಿಗೆ ನೀರು ಹರಿಸಿ ರಾಜ್ಯದಲ್ಲಿರುವ ಜಲಾಶಯಗಳನ್ನು ಖಾಲಿ ಮಾಡಿರುವ ಕೀರ್ತಿ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಇವರುಗಳಿಗೆ ಸಲ್ಲುತ್ತದೆ. ಮೇಕೆದಾಟಿಗಾಗಿ ತಮಿಳುನಾಡು ವಿರುದ್ಧ ಪಾದಯಾತ್ರೆ ನಡೆಸಿದ ಈಗಿನ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ರಾಜ್ಯದ ಆರು ಕೋಟಿ ಜನರಿಗೆ ಅವಮಾನಗೊಳಿಸುತ್ತಿದ್ದಾರೆ. ಬಿ.ಎಸ್.ಯಡಿಯೂರಪ್ಪನವರು ರಾಜ್ಯದ ಮುಖ್ಯಮಂತ್ರಿಯಾಗಿದ್ದಾಗ ಎಲ್ಲಾ ಜಲಾಶಯಗಳೂ ಭರ್ತಿಯಾಗಿದ್ದವು. ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದು ನಾಲ್ಕೆ ತಿಂಗಳಲ್ಲಿ ಬೋ□□ಗಳು ಒಣಗಿವೆ ಎಂದು ಲೇವಡಿ ಮಾಡಿದರು.

ಉಚಿತ ಗ್ಯಾರೆಂಟಿ, ಭಾಗ್ಯಗಳ ಹೆಸರಿನಲ್ಲಿ ರಾಜ್ಯದ ಜನರಿಗೆ ಕಾಂಗ್ರೆಸ್ ಸರ್ಕಾರ ಟೋಪಿ ಹಾಕಿದೆ. ಬಿಜೆಪಿ.ಸರ್ಕಾರ ಕೊಟ್ಟಿದ್ದ ಕೃಷಿ ಸಮ್ಮಾನ್, ರೈತ ಮಕ್ಕಳ ವಿದ್ಯಾಸಿರಿ ಯೋಜನೆಯನ್ನು ಕಾಂಗ್ರೆಸ್ ಕಿತ್ತಾಕಿದೆ. ಐದು ರಾಜ್ಯಗಳ ಚುನಾವಣೆಗೆ ಕೋಟಿಗಟ್ಟಲೆ ಹಣ ಸಂಗ್ರಹಿಸುತ್ತಿದ್ದು, ಬಾ□□□□ಗಟ್ಟಲೆ ನೋಟುಗಳ ಶೇಖರಣೆಯಾಗುತ್ತಿದೆ. ಎಸ್ಸಿ, ಎಸ್ಟಿ,ಗಾಗಿಯೇ ಬಿಜೆಪಿ. ಬಜೆ□□ನಲ್ಲಿ ಮೀಸಲಿಟ್ಟಿದ್ದ ಹನ್ನೊಂದುವರೆ ಸಾವಿರ ಕೋಟಿ ರೂ.ಗಳನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಕಡಿತಗೊಳಿಸಿದ್ದು, ಏಕೆ. ಭದ್ರಾಮೇಲ್ದಂಡೆ ಯೋಜನೆ ಸ್ಥಬ್ದವಾಗಿದೆ. ನಿಗಧಿತ ಅವಧಿಯಲ್ಲಿ ಕಾಮಗಾರಿಯನ್ನು ಪೂರ್ಣಗೊಳಿಸದಿದ್ದರೆ ಜಿಲ್ಲೆಯಿಂದ ಲಕ್ಷಾಂತರ ಜನ ವಿಧಾನಸೌಧಕ್ಕೆ ಮುತ್ತಿಗೆ ಹಾಕುತ್ತೇವೆಂದು ಎಚ್ಚರಿಸಿದರು.

ಹೊಳಲ್ಕೆರೆ ಶಾಸಕ ಎಂ.ಚಂದ್ರಪ್ಪ ಇಂತಹ ಭ್ರಷ್ಟ ಸರ್ಕಾರವನ್ನು ಹಿಂದೆಂದು ಕಂಡಿರಲಿಲ್ಲ. ರೈತರು ತಮ್ಮ ಬೆಳೆಗಳನ್ನು ಉಳಿಸಿಕೊಳ್ಳಲು ಹರಸಾಹಸಪಡುತ್ತಿದ್ದಾರೆ. ಬೆಲೆ ಏರಿಕೆಯಿಂದ ಜನಸಾಮಾನ್ಯರು ಕಂಗಾಲಾಗಿದ್ದರೆ. ಮೊದಲೆ ಬರಗಾಲಕ್ಕೆ ತುತ್ತಾಗಿರುವ ರೈತರಿಗೆ ಗಾಯದ ಮೇಲೆ ಬರೆ ಎಳೆಯುವ ಕೆಲಸ ಮಾಡುತ್ತಿರುವ ರಾಜ್ಯ ಕಾಂಗ್ರೆಸ್ ಸರ್ಕಾರ ಜಿಲ್ಲೆಗೆ ನೀರಾವರಿ ಯೋಜನೆಯನ್ನು ಜಾರಿಗೆ ತಂದು ರೈತರ ಹೊಲಗಳಿಗೆ ನೀರು ಹರಿಸಲಿ ಎಂದು ಒತ್ತಾಯಿಸಿದರು.ಬಿಜೆಪಿ. ಜಿಲ್ಲಾಧ್ಯಕ್ಷ ಎ.ಮುರಳಿ, ಉಪಾಧ್ಯಕ್ಷ ಸಂಪ□□ಕುಮಾರ್,ಪ್ರಧಾನ ಕಾರ್ಯದರ್ಶಿ ಜೈಪಾಲ್, ಭೀಮಸಮುದ್ರದ ಯುವ ಮುಖಂಡರುಗಳಾದ ಜಿ.ಎಸ್. ಅನಿ□□ಕುಮಾರ್, ರಘುಚಂದನ್, ನಗರಾಧ್ಯಕ್ಷ ನವೀನ್ ಚಾಲುಕ್ಯ, ಗ್ರಾಮಾಂತರ ಅಧ್ಯಕ್ಷ ಕಲ್ಲೇಶಯ್ಯ, ಎ.ರೇಖ, ದಗ್ಗೆ ಶಿವಪ್ರಕಾಶ್, ನಂದಿ ನಾಗರಾಜ್, ಶ್ಯಾಮಲಶಿವಪ್ರಕಾಶ್, ರೈತ ಮೋರ್ಚ ಜಿಲ್ಲಾಧ್ಯಕ್ಷ ವೆಂಕಟೇ□□ಯಾದವ್, ಮಲ್ಲಿಕಾರ್ಜುನ್, ಮಾಧುರಿಗಿರೀಶ್, ಶಿವಣ್ಣಾಚಾರ್, ನರೇಂದ್ರ, ಶಾಂತಮ್ಮ, ಕಾಂಚನ, ಕಿರಣ್, ಶಿವಣ್ಣಾಚಾರ್, ಹೇಮಂತ್ ಪಾಲ್ಗೊಂಡಿದ್ದರು.

ಸಮಾಜದ ಅಂಕುಡೊಂಕು ತಿದ್ದುವ ಸಾಧನವೇ ಶಿಕ್ಷಣ: ಸಿಎಂ

» ಮೈಸೂರು

ವೈಚಾರಿಕ , ವೈಜ್ಞಾನಿಕ ಚಿಂತನೆಗೆ ಶಿಕ್ಷಣ ಅಗತ್ಯ. ಮೌಢ್ಯ ಹಾಗೂ ಕಂದಾಚಾರದಿಂದ ಸಮಾಜದ ಹಿನ್ನಡೆಯಾಗುತ್ತದೆ. ಶಿಕ್ಷಣ ಸಮಾಜದ ಅಂಕುಡೊಂಕುಗಳನ್ನು ತಿದ್ದುವ ಸಾಧನವಾಗಬೇಕು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಎಂದು ತಿಳಿಸಿದರು.

ಅವರು ಇಂದು *ಮೈಸೂರು* *ವಿಶ್ವವಿದ್ಯಾಲಯದ ಯುವರಾಜ* ಕಾಲೇಜಿನ *ಹಿರಿಯ ವಿದ್ಯಾರ್ಥಿಗಳ ಸಂಘ* (ರಿ) ವತಿಯಿಂದ ಕಾಲೇಜಿನ *ಅಮೃತ* *ಮಹೋತ್ಸವ ಸಭಾಂಗಣದಲ್ಲಿ*ಆಯೋಜಿಸಿರುವ"*20ನೆಯ* *ವಾರ್ಷಿಕ ಸರ್ವ ಸದಸ್ಯರ* ಮಹಾಸಭೆಯಲ್ಲಿ ಪಾಲ್ಗೊಂಡು ಮಾತನಾಡಿದರು.

ಜ್ಞಾನ ವಿಕಾಸವಾಗಲು ಶಿಕ್ಷಣ ಅಗತ್ಯ. ನಾವೂ ಅನಕ್ಷರಸ್ಥರಂತೆ ನಡೆದುಕೊಳ್ಳುವುದಾದರೆ ಶಿಕ್ಷಣದ ಅಗತ್ಯವೇ ಇಲ್ಲ. ಸಮಾಜದಲ್ಲಿ ಜಾತಿ ವ್ಯವಸ್ಥೆಯಿದೆ. ಜಾತಿಯಿಂದಲೇ ಆರ್ಥಿಕ ಮತ್ತು ಸಾಮಾಜಿಕ ಅಸಮಾನತೆಯಿದೆ. ಶೂದ್ರರು, ಮಹಿಳೆಯರು ಶಿಕ್ಷಣದಿಂದ ವಂಚಿತರಾಗಿದ್ದರು. ಸಮಾಜದಲ್ಲಿ ಅವಕಾಶಗಳಿಂದ, ನ್ಯಾಯದಿಂದ ವಂಚಿತರಾಗಿದ್ದರೆ, ಅವರ ಪರಿಸ್ಥಿತಿಯನ್ನು ಸುಧಾರಿಸಬೇಕು. ವೈಚಾರಿಕ , ವೈಜ್ಞಾನಿಕ ಚಿಂತನೆಗೆ ಶಿಕ್ಷಣ ಅಗತ್ಯ. ಮೌಢ್ಯಗಳು, ಕಂದಾಚಾರದಿಂದ ಸಮಾಜದ ಹಿನ್ನಡೆಯಾಗಿದೆ. ಶಿಕ್ಷಿತರು ಸಮಾಜದಲ್ಲಿ ಬದಲಾವಣೆಯನ್ನು ತರಲು ಪ್ರಯತ್ನಿಸಬೇಕು. ಚಲನೆಯಿಲ್ಲದ ಸಾಮಾಜಿಕ ವ್ಯವಸ್ಥೆಯಲ್ಲಿ ಬದಲಾವಣೆ ಸಾಧ್ಯವಿ

ಚಿನ್ನದ ಬೆಲೆ	
91.6 ಕೆಡಿಎಂ (ಗ್ರಾಂ)	5500
85 ಕೆಡಿಎಂ (ಗ್ರಾಂ)	5100

ಬೆಳ್ಳಿ ಬೆಲೆ	
ಕೆಜಿ	63500

ಫಾಸ್ಟ್ ನ್ಯೂಸ್

ಲೋಕಾಯುಕ್ತ: ಅಹವಾಲು ಸ್ವೀಕಾರ

» ಚಿತ್ರದುರ್ಗ

ಅಕ್ಟೋಬರ್ 19 ರಿಂದ 21 ರವರೆಗೆ ಜಿಲ್ಲೆಯ ವ್ಯಾಪ್ತಿಯಲ್ಲಿ ಬರುವ ಎಲ್ಲಾ ತಾಲ್ಲೂಕುಗಳಿಗೆ ಖುದ್ದಾಗಿ ಲೋಕಾಯುಕ್ತ ಅಧಿಕಾರಿಗಳು ಭೇಟಿ ನೀಡಿ, ಸಾರ್ವಜನಿಕರಿಂದ ದೂರು ಹಾಗೂ ಅವಹಾಲುಗಳನ್ನು ಸ್ವೀಕರಿಸಲಿದ್ದಾರೆ.

ಅಕ್ಟೋಬರ್ 19 ಗುರುವಾರಂದು ಚಳ್ಳಕೆರೆ ಮತ್ತು ಹೊಳಲ್ಕೆರೆ ತಾಲ್ಲೂಕು ಕಚೇರಿಗಳಲ್ಲಿ, ಅಕ್ಟೋಬರ್ 20 ರಂದು ಮೊಳಕಾಲ್ಮೂರು ಮತ್ತು ಹಿರಿಯೂರು ತಾಲ್ಲೂಕು ಕಚೇರಿಗಳಲ್ಲಿ, ಅಕ್ಟೋಬರ್ 21 ರಂದು ಹೊಸದುರ್ಗ ತಾಲ್ಲೂಕು ಕಚೇರಿಯಲ್ಲಿ, ಪ್ರತಿದಿನ ಬೆಳಿಗ್ಗೆ 10.30 ರಿಂದ ಮಧ್ಯಾಹ್ನ 1.30 ವರೆಗೆ ಲೋಕಾಯುಕ್ತ ಅಧಿಕಾರಿಗಳು ಹಾಜರಿದ್ದು, ದೂರು, ಅಹವಾಲು ಸ್ವೀಕರಿಸುವರು ಎಂದು ಪೊಲೀಸ್ ಅಧೀಕ್ಷಕ ಎನ್.ವಾಸುದೇವರಾಮ ತಿಳಿಸಿದ್ದಾರೆ.

ತೋಟಗಾರಿಕೆ ಬೆಳೆಗಳಿಗೆ ಸಹಾಯಧನ: ಅರ್ಜಿ

» ಚಿತ್ರದುರ್ಗ

2023–24ನೆ ಸಾಲಿನ ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ ಯೋಜನೆಯಡಿ ತೋಟಗಾರಿಕೆ ಬೆಳೆಗಳಿಗೆ(ಅಡಿಕೆ ಬೆಳೆ ಹೊರತುಪಡಿಸಿ) ಹನಿ ನೀರಾವರಿ ಪದ್ಧತಿ ಅಳವಡಿಸಿಕೊಳ್ಳುವ ಸಾಮಾನ್ಯ ವರ್ಗ ರೈತರಿಗೆ ಶೇ.75%, ಪರಿಶಿಷ್ಟ ಜಾತಿ ಮತ್ತು ಪಂಗಡದ ರೈತರಿಗೆ ಶೇ.90% ಸಹಾಯಧನಕ್ಕೆ ಅರ್ಜಿ ಆಹ್ವಾನಿಸಲಾಗಿದೆ.ಹೆಚ್ಚಿನ ಮಾಹಿತಿಗಾಗಿ ಸಹಾಯಕ ತೋಟಗಾರಿಕೆ ಅಧಿಕಾರಿಗಳಾದ ಎನ್.ಎಂ.ಮೇಘನ (ಕಸಬಾ–1) 8296763058, ಎಸ್.ಎಂ.ಹರೀಶ (ಕಸಬಾ–2) 7065079256, ಎಂ.ಆರ್.ಪೂಜಾ (ಭರಮಸಾಗರ) 8105891565, ಹೆಚ್.ತಿಪ್ಪೇಸ್ವಾಮಿ (ಹಿರೇಗುಂಟನೂರು) 9902227011, ಜೀತೇಂದ್ರ ಚೌವ್ಹಣ್ (ತುರುವನೂರು) 6362645646 ಗೆ ಸಂಪರ್ಕಿಸಬಹುದು ಎಂದು ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕಿ ಟಿ.ಆರ್.ಶಶಿಕಲ ತಿಳಿಸಿದ್ದಾರೆ.

ಬಾಲ್ಯ ವಿವಾಹ ಮುಕ್ತ ಕರ್ನಾಟಕ ಅಭಿಯಾನದ ಬಗ್ಗೆ ಕಾನೂನು ಅರಿವು ಕಾರ್ಯಕ್ರಮ

» ಚಿತ್ರದುರ್ಗ

ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಹಾಗೂ ಶಾಲಾ ಶಿಕ್ಷಣ ಇಲಾಖೆ, ವಕೀಲರ ಸಂಘ, ಸೆಂಟ್ ಜೊಸೇಟ್ ಕಾನ್ವಂಟ್ ಇವರ ಸಹಯೋಗದಲ್ಲಿ ಸೋಮವಾರ ಸೆಂಟ್ ಜೊಸೇಪ್ ಕಾನ್ವಂಟ್ ಶಾಲೆಯಲ್ಲಿ ಬಾಲ್ಯವಿವಾಹ ಮತ್ತು ಬಾಲ್ಯ ವಿವಾಹ ಮುಕ್ತ ಕರ್ನಾಟಕ ಅಭಿಯಾನ ಅಂಗವಾಗಿ ಕಾನೂನು ಅರಿವು ನೆರವು ಕಾರ್ಯಕ್ರಮವನ್ನು ಆಯೋಜಿಸಲಾಗಿತ್ತು. ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ನ್ಯಾಯಧೀಶರು ಹಾಗೂ ಸದಸ್ಯ ಕಾರ್ಯದರ್ಶಿ ಎಂ.ವಿಜಯ್ ಉದ್ಘಾಟಿಸಿದರು. ಸೇಂಟ್ ಜೋಸೆಫ್ ಕಾನ್ವೆಂಟಿ ಮುಖ್ಯ ಶಿಕ್ಷಕಿ ಸಿಸ್ಟರ್ ಬಾಲ ಮೇರಿ ಅವರು ಅಧ್ಯಕ್ಷತೆ ವಹಿಸಿದ್ದರು. ಶಿಶು ಅಭಿವೃದ್ಧಿ ಯೋಜನಾಧಿಕಾರಿ ಲೋಕೇಶ್ವರಪ್ಪ ಬಾಲ್ಯ ವಿವಾಹದ ಕುರಿತು ಉಪನ್ಯಾಸ ನೀಡಿದರು. ಈ ಸಂದರ್ಭದಲ್ಲಿ ಬಾಲ್ಯ ವಿವಾಹ ವಿರುದ್ಧ ಪ್ರತಿಜ್ಞಾ ವಿಧಿ ಭೋಧಿಸಲಾಯಿತು. ಕಾರ್ಯಕ್ರಮದಲ್ಲಿ ಸಾರ್ವಜನಿಕ ಶಿಕ್ಷಣ ಇಲಾಖೆ ಕ್ಷೇತ್ರ ಶಿಕ್ಷಣಾಧಿಕಾರಿ ನಾಗಭೂಷಣ್, ವಕೀಲರ ಸಂಘ ಉಪಾಧ್ಯಕ್ಷ ಬಿ.ಎಂ. ಅನಿಲ್ ಕುಮಾರ್ ಸೇರಿದಂತೆ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

ಅ.17 ರಂದು ಶಾದಿಮಹಲ್ ಭವನ ನೂತನ ಕಟ್ಟಡದ ಶಂಕುಸ್ಥಾಪನೆ

» ಚಿತ್ರದುರ್ಗ

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಅಂಜುಮಾನ್–ಎ–ದಾರೂಲ್–ಉದಾ ಸಂಸ್ಥೆಯ ಸಂಯುಕ್ತಾಶ್ರಯದಲ್ಲಿ ಅಕ್ಟೋಬರ್ 17 ರಂದು ಮಧ್ಯಾಹ್ನ 3.30 ಗಂಟೆಗೆ ನಗರದ ಅಗಸನಕಲ್ಲು ರಸ್ತೆ ಶಾದಿಮಹಲ್ ಸಮುದಾಯ ಭವನ ನೂತನ ಕಟ್ಟಡದ ಶಂಕುಸ್ಥಾಪನೆ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ.ಕೇಂದ್ರ ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಇಲಾಖೆ ರಾಜ್ಯ ಸಚಿವ ಎ. ನಾರಾಯಣಸ್ವಾಮಿ ಘನ ಉಪಸ್ಥಿತಿ ವಹಿಸುವವರು. ಯೋಜನೆ ಮತ್ತು ಸಾಂಖ್ಯಿಕ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ ಕಾರ್ಯಕ್ರಮವನ್ನು ಉದ್ಘಾಟಿಸುವರು. ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಸಚಿವ ಬಿ.ಝಡ್. ಜಮೀರ್ ಅಹಮದ್ ಖಾನ್ ನೂತನ ಕಟ್ಟಡದ ಶಂಕುಸ್ಥಾಪನೆ ನೇರವೇರಿಸುವರು. ಶಾಸಕ ಕೆ.ಸಿ.ವೀರೇಂದ್ರ ಪಪ್ಪಿ ಅಧ್ಯಕ್ಷತೆ ವಹಿಸುವರು.

ಮುಖ್ಯ ಅತಿಥಿಗಳಾಗಿ ಕರ್ನಾಟಕ ರಾಜ್ಯ ವಕ್ಫ್ ಮಂಡಳಿ ಅಧ್ಯಕ್ಷ ಕೆ. ಅನ್ವರ್ ಭಾಷಾ, ಶಾಸಕರಾದ ಟಿ.ರಘುಮೂರ್ತಿ, ಎನ್.ವೈ.ಗೋಪಾಲಕೃಷ್ಣ, ಡಾ.ಎಂ.ಚಂದ್ರಪ್ಪ, ಬಿ.ಜಿ. ಗೋವಿಂದಪ್ಪ, ವಿಧಾನ ಪರಿಷತ್ ಸದಸ್ಯರಾದ ಡಾ.ವೈ.ಎ ನಾರಾಯನಸ್ವಾಮಿ, ಚಿದಾನಂದ ಎಂ. ಗೌಡ, ಕೆ.ಎಸ್. ನವೀನ್ ಭಾಗವಹಿಸುವರು.ವಿಶೇಷ ಆಹ್ವಾನಿತರಾಗಿ ಬೆಂಗಳೂರು ವಿಭಾಗದ ಪ್ರಾದೇಶಿಕ ಆಯುಕ್ತ ಹಾಗೂ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಅಮ್ಲಾನ್ ಆದಿತ್ಯ ಬಿಸ್ವಾಸ್, ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ಹಜ್ ಮತ್ತು ವಕ್ಫ್ ಇಲಾಖೆ ಕಾರ್ಯದರ್ಶಿ ಮನೋಜ್ ಜೈನ್, ಅಲ್ಪಸಂಖ್ಯಾತರ ನಿರ್ದೇಶನಾಲಯದ ನಿರ್ದೇಶಕ ಜಿಲಾನಿ ಹೆಚ್ ಮೊಕಾಶಿ ಭಾಗವಹಿಸುವರು.

ಪ್ರಗತಿ ಪರಿಶೀಲನಾ ಸಭೆಯಲ್ಲಿ ಕೇಂದ್ರ ಸಚಿವ ಎ.ನಾರಾಯಣಸ್ವಾಮಿ ಹೇಳಿಕೆ

ಹಸು, ಕುರಿ ಸಾಗಣೆಕೆಗೆ ರಿಯಾಯಿತಿ ಬಡ್ಡಿ ಸಾಲ

» ಚಿತ್ರದುರ್ಗ

ಸರ್ಕಾರದ ವಿವಿಧ ಯೋಜನೆಗಳಡಿ ಸಾಲ ಮಂಜೂರಾತಿಗೆ ಬ್ಯಾಂಕುಗಳು ಸಿಬಿಲ್ ಸ್ಕೋರ್ ಪರಿಗಣಿಸಬಾರದು. ಹಾಲು ಉತ್ಪಾದಕ ಸಂಘಗಳ ಸಹಯೋಗದಲ್ಲಿ ಹಸು ಸಾಕಾಣಿಕೆಗೆ, ಸಣ್ಣ ಘಟಕಗಳ ಆಧಾರದಲ್ಲಿ ಪಾರಂಪರಿಕವಾಗಿ ಕುರಿ ಸಾಕಾಣಿಕೆ ಮಾಡಿಕೊಂಡು ಬಂದ ಸಮುದಾಯಗಳಿಗೆ ರಿಯಾಯಿತಿ ಬಡ್ಡಿದರದಲ್ಲಿ ಸಾಲ ಒದಗಿಸುವಂತೆ ಕೇಂದ್ರ ಸಾಮಾಜಿಕ ನ್ಯಾಯ ಹಾಗೂ ಸಬಲೀಕರಣ ಇಲಾಖೆ ರಾಜ್ಯ ಖಾತೆ ಸಚಿವ ಎ.ನಾರಾಯಣಸ್ವಾಮಿ ಹೇಳಿದರು.

ಸೋಮವಾರ ನಗರದ ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ, ಭಾರತ ಸರ್ಕಾರದ ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಇಲಾಖೆ ಅಡಿ ಕಾರ್ಯನಿರ್ವಹಿಸುವ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಹಿಂದುಳಿದ ವರ್ಗ, ಸಫಾಯಿ ಕರ್ಮಚಾರಿ ಹಾಗೂ ದಿವ್ಯಾಂಗರ ರಾಷ್ಟ್ರೀಯ ಹಣಕಾಸು ಹಾಗೂ ಅಭಿವೃದ್ಧಿ ನಿಗಮಗಳ ಅನುದಾನದಡಿ, ನೀಡುವ ಸಾಲ ಸೌಲಭ್ಯ ಯೋಜನೆಗಳ ಅನುಷ್ಠಾನದ ಕುರಿತು, ಚಿತ್ರದುರ್ಗ, ತುಮಕೂರು, ದಾವಣಗೆರೆ ಜಿಲ್ಲೆಯ ಜಿಲ್ಲಾ ಮಟ್ಟದ ಅಧಿಕಾರಿಗಳು, ಬ್ಯಾಂಕ್ ಅಧಿಕಾರಿಗಳ ಪ್ರಗತಿ ಪರಿಶೀಲನಾ ಸಭೆ ನಡೆಸಿ ಅವರು ಮಾತನಾಡಿದರು.

ಸಾಮಾಜಿಕವಾಗಿ ಹಿಂದುಳಿದವರು ಸ್ವಂತ ಉದ್ಯೋಗ ಕೈಗೊಂಡು ಸ್ವಾವಲಂಬಿ ಜೀವನ ನಡೆಸಲು ಅನುಕೂಲವಾಗುವಂತೆ, ಕೇಂದ್ರ ಸರ್ಕಾರ ಹಲವು ನಿಗಮಗಳನ್ನು ಸ್ಥಾಪಿಸಿ, ಬ್ಯಾಂಕುಗಳ ಮೂಲಕ ಫಲಾನುಭವಿಗಳಿಗೆ ರಿಯಾಯಿತಿ ಬಡ್ಡಿದರದಲ್ಲಿ ಸಾಲ ಸೌಲಭ್ಯ ನೀಡುವ ಯೋಜನೆ ಜಾರಿಗೊಳಿಸಿದೆ. ಆದರೆ ಬ್ಯಾಂಕ್‌ಗಳು ಈ ಸೌಲಭ್ಯದ ಕುರಿತು ಸಾರ್ವಜನಿಕರಿಗೆ ಯಾವುದೇ ಮಾಹಿತಿ ಸಮರ್ಪಕವಾಗಿ ನೀಡುತ್ತಿಲ್ಲ. ನಿಗಮಗಳು ಬ್ಯಾಂಕ್‌ಗಳಲ್ಲಿ ಠೇವಣಿ ಇರಿಸಿದ ಹಣದ ಬಳಕೆಯೇ ಆಗಿಲ್ಲ. ಸಿಬಿಲ್ ಸ್ಕೋರ್, ಸಾಲ ಮರುಪಾವತಿ ಅರ್ಹತೆ ಮುಂತಾದ ನೆಪಗಳನ್ನು ಹೇಳಿ ಸಾಲ ಸೌಲಭ್ಯಕ್ಕೆ ಸಲ್ಲಿದ ಅರ್ಜಿಯನ್ನು ಬ್ಯಾಂಕುಗಳಿಂದ ತಿರಸ್ಕರಿಸಲಾಗುತ್ತಿದೆ ಎಂಬ ದೂರುಗಳು ಕೇಳಿಬರುತ್ತಿವೆ ಎಂಬುದಾಗಿ ಕೇಂದ್ರ ಸಚಿವ ಎ.ನಾರಾಯಣ ಸ್ವಾಮಿ ಅಸಮಾಧಾನ ವ್ಯಕ್ತ ಪಡಿಸಿದರು.

ಸಾಮಾಜಿಕವಾಗಿ ಹಿಂದುಳಿದ ವ್ಯಕ್ತಿಗಳು, ಬಡವರು ಸ್ವಂತ ಉದ್ಯೋಗ ಕೈಗೊಂಡು ಅಭಿವೃದ್ಧಿ ಹೊಂದಲು ಸಾಲ ಸೌಲಭ್ಯ ನೀಡುವಾಗ, ಇದಕ್ಕೆ ಸಿಬಿಲ್ ಸ್ಕೋರ್ ಹಾಗೂ ಆಸ್ತಿ ಭದ್ರತೆಯನ್ನು ಬ್ಯಾಂಕುಗಳು ಬಯಸುವುದು ಎಷ್ಟು ಸರಿ. ಇದು ಸರ್ಕಾರ ಜಾರಿ ಮಾಡಿರುವ ಯೋಜನೆಗಳ ಆಶಯಕ್ಕೆ ವಿರುದ್ಧವಾಗಿದೆ. ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಇಲಾಖೆಯ ಐದು ನಿಗಮಗಳ ಯೋಜನೆಯಡಿ ಬ್ಯಾಂಕುಗಳು ಇದವರೆಗೆ ಎಷ್ಟು ಜನರಿಗೆ ಸಾಲ ಸೌಲಭ್ಯ ನೀಡಿವೆ ಹೇಳಿ ಎಂದು ಸಚಿವ ಎ.ನಾರಾಯಣ ಸ್ವಾಮಿ ಬ್ಯಾಂಕ್ ಅಧಿಕಾರಿಗಳನ್ನು ಪ್ರಶ್ನಿಸಿದರು.

ಕೇಂದ್ರ ಸರ್ಕಾರ ಪ್ರತಿ ವರ್ಷವೂ ಸಾಲ ಸೌಲಭ್ಯ ಯೋಜನೆಗೆ ಅನುದಾನವನ್ನು ಮೀಸಲಿಡುತ್ತದೆ. ಆದರೆ ಕಳೆದ ವರ್ಷಗಳಲ್ಲಿ ಬ್ಯಾಂಕುಗಳಲ್ಲಿ ಸರ್ಕಾರದಿಂದ ಇರಿಸಿದ ಠೇವಣಿ ಹಣವೇ ಬಳಕೆಯಾಗಿಲ್ಲ. ಇದು ವಿರ್ಪಯಾಸದ ಸಂಗತಿಯಾಗಿದೆ. ಬ್ಯಾಂಕುಗಳು ಸರ್ಕಾರದ ಯೋಜನೆಗಳನ್ನು ಜನರಿಗೆ ತಲುಪಿಸುವಲ್ಲಿ ನಿರ್ಲಕ್ಷ್ಯ ಧೋರಣೆ ತೋರಿಸುತ್ತಿವೆ. ಇದು ಸಲ್ಲದು, ಯೋಜನೆಗಳನ್ನು ಬ್ಯಾಂಕುಗಳು ಜನರಿಗೆ ತಲುಪಿಸದಿದ್ದರೆ, ನಿಗಮಗಳಿಂದ ಇರಿಸಿದ ಠೇವಣಿ ಹಣವನ್ನು ಹಿಂಪಡೆದು ಬೇರೆ ಮಾರ್ಗವಾಗಿ ಜನರಿಗೆ ತಲುಪಿಸುವ ಬಗ್ಗೆ ಚಿಂತಿಸಬೇಕಾಗುವುದು ಎಂದರು.

ಹಸು, ಕುರಿ ಸಾಕಾಣಿಕೆಗೆ ರಿಯಾಯಿತಿ ಬಡ್ಡಿದರದಲ್ಲಿ ಸಾಲ: ಚಿತ್ರದುರ್ಗ ಹಾಗೂ ತುಮಕೂರು ಜಿಲ್ಲೆಯಲ್ಲಿ ಹೈನುಗಾರಿಕೆ ಮುಖ್ಯ ವೃತ್ತಿಯಾಗಿದೆ. ಈ ಭಾಗದಲ್ಲಿನ ಹಾಲು ಉತ್ಪಾದಕ ಸಂಘಗಳ ಸಹಯೋಗದಲ್ಲಿ ಅರ್ಹ ಫಲಾನುಭವಿಗಳನ್ನು ಗುರುತಿಸಿ ಹಸು ಸಾಕಾಣಿಕೆಗೆ ರಿಯಾಯಿತಿ ಬಡ್ಡಿದರದಲ್ಲಿ ಸಾಲ ಸೌಲಭ್ಯ ಮಂಜೂರು ಮಾಡಬೇಕು.

ನಾಯಕರು, ಬೋವಿ, ಗೊಲ್ಲರು ಹಾಗೂ ಕುರುಬ ಸಮುದಾಯಗಳಿಗೆ ಸೇರಿದಂತೆ ಹಲವು ಸಮುದಾಯಗಳು ಸಾಂಪ್ರದಾಯಕವಾಗಿ ಕುರಿ ಸಾಕಾಣಿಕೆ ಮಾಡಿಕೊಂಡು ಬರುತ್ತಿದ್ದಾರೆ. ಹೊಸದಾಗಿ ಕುರಿ ಮೇಕೆ ಸಾಕಾಣಿಕೆ ಮಾಡಲು ಇಚ್ಛಿಸುವವರಿಗೆ 25 ಅಥವಾ 50 ಕುರಿಗಳ ಘಟಕಕ್ಕೆ ಕುರಿ, ಮೇಕೆ ಸಾಕಾಣಿಕೆ ಸಾಲವನ್ನು ಮಂಜೂರು ಮಾಡಬೇಕು.

ಈ ಸಾಲಗಳನ್ನು ಮಂಜೂರು ಮಾಡುವಾಗ ಅಗತ್ಯ ದಾಖಲೆಗಳನ್ನು ಹೊರುತುಪಡಿಸಿ, ಅನಗತ್ಯವಾಗಿ ಹೆಚ್ಚಿನ ದಾಖಲೆಗಳನ್ನು ಕೇಳಬಾರದು. ಪ್ರತಿ ಬ್ಯಾಂಕ್ ಶಾಖೆಗಳಿಗೂ ಗುರಿ ನಿಗದಿಪಡಿಸಿ, ಫಲಾನುಭವಿಗಳನ್ನು ಆಯ್ಕೆ ಮಾಡಿ ಯೋಜನೆಗಳನ್ನುಅನುಷ್ಠಾನಗೊಳಿಸಬೇಕು ಎಂದರು.

ಪಿ.ಎಂ. ಸ್ವನಿಧಿ ಹಾಗೂ ವಿಶ್ವಕರ್ಮ ಯೋಜನೆ ಪರಿಣಾಮಕಾರಿ ಅನುಷ್ಠಾನಕ್ಕೆ ಸೂಚನೆ: ಬ್ಯಾಂಕುಗಳಲ್ಲಿ ಪಿ.ಎಂ.ಸ್ವನಿಧಿಯ 2ನೇ ಹಾಗೂ 3ನೇ ಹಂತದ ಸಾಲ ಸೌಲಭ್ಯ ಮಂಜೂರು ಮಾಡುವಲ್ಲಿ ತೊಡಕು ಉಂಟಾಗುತ್ತಿದೆ. ಸಾಲ ಹಿಂದಿರುಗಿಸಿದರೂ ಬ್ಯಾಂಕುಗಳು ಇಲ್ಲ ಸಲ್ಲದ ನೆಪ ಹೇಳಿ ಸಾಲ ಮಂಜೂರು ಮಾಡುತ್ತಿಲ್ಲ ಎಂದು ಸಾರ್ವಜನಕರು ದೂರು ಸಲ್ಲಿಸುತ್ತಿದ್ದಾರೆ. ಈ ಕುರಿತು ಬ್ಯಾಂಕುಗಳು ಗಮನ ಹರಿಸಬೇಕು. ಕೇಂದ್ರ ಸರ್ಕಾರ ಜಾರಿಗೊಳಿಸಿರುವ ಪಿ.ಎ.ವಿಶ್ವಕರ್ಮ ಯೋಜನೆಯಡಿ ಹೆಚ್ಚು ಜನರ ನೊಂದಣಿ ಮಾಡಿಸಿ, ಕುಶಲಕರ್ಮಿಗಳಿಗೆ ತರಬೇತಿ ಹಾಗೂ ಸಾಲ ಸೌಲಭ್ಯ ನೀಡಬೇಕು ಎಂದರು.ಪಿ.ಎಂ.ವಿಶ್ವಕರ್ಮ ಯೋಜನೆಯಡಿ ಚಿತ್ರದುರ್ಗ ಜಿಲ್ಲೆಯಲ್ಲಿ 2543 ಹಾಗೂ ತುಮಕೂರು ಜಿಲ್ಲೆಯಲ್ಲಿ 4500ಕ್ಕೂ ಹೆಚ್ಚು ನೊಂದಣಿಯಾಗಿವೆ. ಆಂದೋಲನದ ರೀತಿಯಲ್ಲಿ ಗ್ರಾಮ ಪಂಚಾಯತಿ ಮಟ್ಟದಲ್ಲಿ ನೊಂದಣಿ ಕಾರ್ಯವನ್ನು ಮಾಡಲಾಗುತ್ತಿದೆ ಎಂದು ಅಧಿಕಾರಿಗಳು ಸಭೆಯಲ್ಲಿ ತಿಳಿಸಿದರು.

ಸಭೆಯಲ್ಲಿ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಹಿಂದುಳಿದ ವರ್ಗ, ಸಫಾಯಿ ಕರ್ಮಚಾರಿ ಹಾಗೂ ದಿವ್ಯಾಂಗರ ರಾಷ್ಟ್ರೀಯ ಹಣಕಾಸು ಹಾಗೂ ಅಭಿವೃದ್ಧಿ ನಿಗಮಗಳ ಯೋಜನೆಗಳ ಅನುಷ್ಠಾನಕ್ಕೆ ನೋಡಲ್ ಬ್ಯಾಂಕ್‌ಗಳನ್ನು ಗುರುತಿಸಿ ಒಪ್ಪಂದ ಮಾಡಿಕೊಳ್ಳಲಾಯಿತು.

ಚಿತ್ರದುರ್ಗ ಜಿಲ್ಲಾಧಿಕಾರಿ ದಿವ್ಯಪ್ರಭು ಜಿ.ಆರ್.ಜೆ, ತುಮಕೂರು ಜಿಲ್ಲಾಧಿಕಾರಿ ಕೆ.ಶ್ರೀನಿವಾಸ, ತುಮಕೂರು ಜಿ.ಪಂ. ಸಿಇಓ ಪ್ರಭು.ಜಿ, ದಾವಣಗೆರೆ ಅಪರ ಜಿಲ್ಲಾಧಿಕಾರಿ ಪಿ.ಎನ್. ಲೋಕೇಶ್ ಪರಿಶಿಷ್ಟ ಜಾತಿ ರಾಷ್ಟ್ರೀಯ ಹಣಕಾಸು ಹಾಗೂ ಅಭಿವೃದ್ಧಿ ನಿಗಮದ ರಂಜನೀಶ್ ಕುಮಾರ್ ಜೆನ್ವಾ, ರಾಜ್ಯ ಮಟ್ಟದ ಬ್ಯಾಂಕರ್ ಸಮಿತಿ ಪ್ರಧಾನ ವ್ಯವಸ್ಥಾಪಕ ಪ್ರವೀಣ್ ಕುಮಾರ್, ಕರ್ನಾಟಕ ಗ್ರಾಮೀಣ ಬ್ಯಾಂಕ್ ಪ್ರಧಾನ ವ್ಯವಸ್ಥಾಪಕ ಜಿ.ಆರ್.ದಿಲ್ ಬಾಬು, ಸೇರಿದಂತೆ ಜಿಲ್ಲಾ ಮಟ್ಟದ ಅಧಿಕಾರಿಗಳು, ವಿವಿಧ ಬ್ಯಾಂಕುಗಳು ಪ್ರಧಾನ ವ್ಯವಸ್ಥಾಪಕರು ಉಪಸ್ಥಿತರಿದ್ದರು.

ವೇದಾಂತ ಮತ್ತು ಸೇವಾ ಮೊಬ್‌ನಿಂದ ಆರೋಗ್ಯ ತಪಾಸಣೆ ಶಿಬಿರ

ಚಿತ್ರದುರ್ಗ: ತಾಲೂಕಿನ ಮೇಗಳಹಳ್ಳಿ ಗ್ರಾಮದಲ್ಲಿ ವೇದಾಂತ ಮತ್ತು ಸೇವಾ ಮೊಬ್ ಇವರ ಸಂಯುಕ್ತ ಆಶ್ರಯದಲ್ಲಿ ಆರೋಗ್ಯ ಮತ್ತು ಪೌಷ್ಟಿಕಾಂಶ ಶಿಬಿರ ನಡೆಯಿತು. ಈ ಸಂದರ್ಭದಲ್ಲಿ ಡಾಕ್ಟರ್ ಗಗನ್ ಭೀಂಫಾಲ್ , ಸಿಎ□□□ರ್ ಮುಖ್ಯಸ್ಥ ರವಿ, ದೇವಾಂಗನ ಭಾಗ್ಯಲಕ್ಷ್ಮಿ, ವೆಂಕಟೇಶ್, ಶಿಲ್ಪ, ಸತೀಶ್ ಮತ್ತು ಗ್ರಾಮ ಪಂಚಾಯತಿ ಸದಸ್ಯ ಪ್ರೇಮಕ್ಕ ಆಶಾ ಕಾರ್ಯಕರ್ತೆ ಹನುಮಮ್ಮ , ಅಂಗನವಾಡಿ ಶಿಕ್ಷಕಿ ಇಂದ್ರಮ್ಮ, ಅನಿತಾ ಮತ್ತು ಗರ್ಭಿಣಿಯರು ಮತ್ತು ಬಾಣಂತಿಯರು ಆರೋಗ್ಯ ತಪಾಸಣೆ ಶಿಬಿರದಲ್ಲಿ ಭಾಗವಹಿಸಿದ್ದರು.

ಅ.23 ರಂದು ಅರ್ಥಪೂರ್ಣವಾಗಿ ರಾಣಿ ಚನ್ನಮ್ಮ ಜಯಂತಿ ಆಚರಣೆ

» ಚಿತ್ರದುರ್ಗ

ಸ್ವಾತಂತ್ರ್ಯಕ್ಕಾಗಿ ಹೋರಾಡಿದ ಧೀರ ಮಹಿಳೆ ಕಿತ್ತೂರು ರಾಣಿ ಚನ್ನಮ್ಮ ಜಯಂತಿಯನ್ನು ಅಕ್ಟೋಬರ್ 23 ರಂದು ಬೆಳಿಗ್ಗೆ 12 ಗಂಟೆಗೆ ನಗರದ ಜಿಲ್ಲಾಧಿಕಾರಿ ಸಭಾಂಗಣದಲ್ಲಿ ಅರ್ಥಪೂರ್ಣ ಹಾಗೂ ಸರಳವಾಗಿ ಆಚರಿಸಲಾಗುವುದು. ಈ ನಿಟ್ಟಿನಲ್ಲಿ ಅಗತ್ಯ ಪೂರ್ವಸಿದ್ಧತೆ ಕೈಗೊಳ್ಳುವಂತೆ ಅಪರ ಜಿಲ್ಲಾಧಿಕಾರಿ ಬಿ.ಟಿ ಕುಮಾರಸ್ವಾಮಿ ಸಲಹೆ ನೀಡಿದರು.ಅ.12 ರಂದು ನಗರದ ಉಪವಿಭಾಗಾಧಿಕಾರಿ ಕಚೇರಿ ಸಭಾಂಗಣದಲ್ಲಿ ಕಿತ್ತೂರು ರಾಣಿ ಚನ್ನಮ್ಮ ಜಯಂತಿ ಆಚರಣೆ ಸಂಬಂಧ ಹಮ್ಮಿಕೊಂಡಿದ್ದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.ಸರ್ಕಾರದ ಶಿಷ್ಟಾಚಾರದ ಅನುಸಾರ ಆಹ್ವಾನ ಪತ್ರಿಕೆ ಮುದ್ರಿಸಿ, ಉತ್ತಮ ವಾಗ್ಮಿಗಳಿಂದ ಉಪನ್ಯಾಸ ಹಾಗೂ ಗೀತ ಗಾಯನ ಕಾರ್ಯಕ್ರಮ ಆಯೋಜಿಸಬೇಕು. ಕಡ್ಡಾಯವಾಗಿ ಎಲ್ಲಾ ಇಲಾಖೆ ಅಧಿಕಾರಿಗಳು ಜುಯಂತಿ ಕಾರ್ಯಕ್ರಮದಲ್ಲಿ ಪಾಲುಗೊಳ್ಳಬೇಕು ಎಂದು ಹೇಳಿದರು.ಸಭೆಯಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಎಸ್.ಕೆ.ಮಲ್ಲಿಕಾರ್ಜುನ, ವೀರಶೈವ ಲಿಂಗಾಯತ ಪಂಚಮಸಾಲಿ ಸಂಘದ ಅಧ್ಯಕ್ಷ ಜೆ. ಶಿವಪ್ರಕಾಶ, ನಿರ್ದೇಶಕ ಬಿ.ಎಸ್ ಮಂಜುನಾಥಸ್ವಾಮಿ, ನಿರ್ದೇಶಕ ಜಿ.ಎಂ. ಪ್ರಕಾಶ, ವೀರಶೈವ ಲಿಂಗಾಯತ ಪಂಚಮಸಾಲಿ ಘಟಕದ ಅಧ್ಯಕ್ಷೆ

ಫಾಸ್ಟ್ ನ್ಯೂಸ್

ಬಾಲಕ ಕಾಣೆ

» ಚಿತ್ರದುರ್ಗ

ಚಿತ್ರದುರ್ಗ ತಾಲ್ಲೂಕಿನ ಮಟ್ಟಿಕಲ್ಲಹಳ್ಳಿ ಗ್ರಾಮ ನಿವಾಸಿ ಅಜಯ್ (17) ತಂದೆ ಓಬಯ್ಯ ಅವರು 2023ರ ಅಕ್ಟೋಬರ್ 8 ರಂದು ಕಾಣೆಯಾಗಿರುವ ಪ್ರಕರಣ ಚಿತ್ರದುರ್ಗ ಗ್ರಾಮಾಂತರ ಪೊಲೀಸ್ ಠಾಣೆಯಲ್ಲಿ ದಾಖಲಾಗಿದೆ. ಅಜಯ್ 5.5 ಅಡಿ ಎತ್ತರವಿದ್ದು, ಕಪ್ಪು ಬಣ್ಣ, ಕೋಲು ಮುಖ, ತಲೆಯಲ್ಲಿ ಕೂದಲು ಜಾಸ್ತಿ ಬಿಟ್ಟಿರುತ್ತಾನೆ, ಬಲ ಕಿವಿಗೆ ರಿಂಗ್ ಧರಿಸಿರುತ್ತಾನೆ. ಕಾಣೆಯಾದ ಸಮಯದಲ್ಲಿ ರೆಡ್ ಟೀ ಶರ್ಟ್, ಕಪ್ಪು ಬಣ್ಣದ ಜೀನ್ಸ್‌ಪ್ಯಾಂಟ್ ಧರಿಸಿರುತ್ತಾನೆ. ಬಾಲಕನ ಕುರಿತು ಮಾಹಿತಿ ತಿಳಿದು ಬಂದಲ್ಲಿ ಚಿತ್ರದುರ್ಗ ಗ್ರಾಮಾಂತರ ಪೊಲೀಸ್ ಠಾಣೆಗೆ ಸಂಪರ್ಕಿಸುವಂತೆ ಪ್ರಕಟಣೆಯಲ್ಲಿ ತಿಳಿಸಿದೆ.

ವಿದ್ಯುತ್ ವ್ಯತ್ಯಯ

» ದಾವಣಗೆರೆ

ಜಲಸಿರಿ ಯೋಜನೆಯಡಿಯಲ್ಲಿ ನಿರಂತರ ಶುದ್ಧಕುಡಿಯುವ ನೀರಿನ ಸರಬರಾಜು ಯೋಜನೆ ಕಾಮಗಾರಿಯನ್ನು ಹಮ್ಮಿಕೊಂಡಿರುವುದರಿಂದ ಅ.17 ರಂದು ಬೆಳಿಗ್ಗೆ 10 ರಿಂದ ಸಂಜೆ 4 ಗಂಟೆಯವರೆಗೆ ವಿದ್ಯುತ್ ವ್ಯತ್ಯಯವಾಗಲಿದೆ ಎಫ್–10 ಸಿ.ಜಿ.ಹೆಚ್ ಫೀಡರ್ ವ್ಯಾಪ್ತಿಯ ಪೋಲಿಸ್ ಕೊಟ್ರಸ್,ಎಂ.ಸಿ.ಸಿ.ಎ ಬ್ಲಾಕ್, ವಿನೋಬ ನಗರ, 1ನೇ ಮೇನ್ 2ನೇ ಮೇನ್ ಮುದ್ದಹಳ್ಳಿ ತೋಟ ಹಾಗೂ ಸುತ್ತಮುತ್ತಲಿನ ಪ್ರದೇಶಗಳು ಎಫ್–09 ಪಿ.ಜೆ ಫೀಡರ್ ವ್ಯಾಪ್ತಿಯ ಪಿ.ಜೆ. ಎಕ್ಸ್‌ಟೇಷನ್, ಎ.ವಿ.ಕೆ ಕಾಲೇಜ್‌ರಸ್ತೆ, ಪಿ.ಬಿ ರಸ್ತೆ, ಅರುಣಚಿತ್ರ ಮಂದಿರ ಸರ್ಕಲ್, ರಾಮ & ಕೋ–ಸರ್ಕಲ್ ಹಾಗೂ ಸುತ್ತ ಮುತ್ತಲಿನ ಪ್ರದೇಶಗಳು ಎಫ್–17 ಮಹಾನಗರ ಪಾಲಿಕೆ ವ್ಯಾಪ್ತಿಯ ಬೆವಿಕಂ ಆಫೀಸ್, ಪಿ.ಬಿರಸ್ತೆ, ಹಳೆ ಬಸ್ ನಿಲ್ದಾಣ, ಅರುಣ ಸರ್ಕಲ್,ಕಾರ್ಪೊರೇಷನ್ ಆಫೀಸ್, ಎಕ್ಸ್‌ಟೇಷನ್ ಪೋಲಿಸ್ ಸ್ಟೇಷನ್, ಹಾಗೂ ಸುತ್ತಮುತ್ತಲಿನ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ ಎದು ಬೆಸ್ಕಾಂ ಪ್ರಕಟಣೆ ತಿಳಿಸಿದೆ.

ವಿಕಲಚೇತನರಿಗೆ ಸಾಲ, ಸೌಲಭ್ಯಕ್ಕಾಗಿ ಅರ್ಜಿ

» ದಾವಣಗೆರೆ

ದೇವರಾಜ್ ಅರಸ್, ಹಿಂದುಳಿದ ಅಭಿವೃದ್ಧಿ ನಿಗಮದ ವತಿಯಿಂದ ಪ್ರಸಕ್ತ ಸಾಲಿನಲ್ಲಿ ವಿಕಲಚೇತನರಿಗೆ ಅಭ್ಯರ್ಥಿಗಳಿಗೆ ಸಾಲ–ಸೌಲಭ್ಯ ಒದಗಿಸಲು ಆನ್‌ಲೈನ್ ಮೂಲಕ ಅರ್ಜಿಗಳ ಆಹ್ವಾನ ಮಾಡಲಾಗಿದೆ. ಅರ್ಜಿ ಸಲ್ಲಿಸಲು ಅ.30 ಕೊನೆಯದಿನವಾಗಿದೆ. ವಿಕಲಚೇತನರಿಗೆ ಮೀಸಲಿರಿಸಿದ ಶೇ.5ರ ಅನುದಾನದಡಿಯಲ್ಲಿ ವಿಕಲಚೇತನ ಫಲಾನುಭವಿ ಆಧಾರಿತ ಯೋಜನೆಗಳನ್ನು ಸದುಪಯೋಗ ಪಡೆದುಕೊಳ್ಳಬಹುದು. ಹೆಚ್ಚಿನ ಮಾಹಿತಿಗಾಗಿ ಶ್ರೀ ದೇವರಾಜು ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ,ಕುರುಬರ ಹಾಸ್ಟೆಲ್ ಕಟ್ಟಡ,ಹದಡಿ ರಸ್ತೆ, ಜಯದೇವ ಸರ್ಕಲ್ ಹತ್ತಿರ, ದಾವಣಗೆರೆ–577002 ಎಂದು ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣಾಧಿಕಾರಿ ಡಾ॥ ಕೆ.ಕೆ. ಪ್ರಕಾಶ್ ತಿಳಿಸಿದ್ದಾರೆ.

ಸರ್ಕಾರದ ಸೂಚನೆ ಮೇರೆಗೆ ಸಮೀಕ್ಷೆ ನಂತರ ಕಾಡುಗೊಲ್ಲ ದೃಢೀಕರಣ ಪತ್ರ ವಿತರಣೆ: ತಹಶೀಲ್ದಾರ್

» ಚಳ್ಳಕೆರೆ

ತಾಲ್ಲೂಕಿನ ಕಾಡುಗೊಲ್ಲ ಸಮುದಾಯ ಜಾತಿ ಮತ್ತು ಆದಾಯ ಪ್ರಮಾಣ ಪತ್ರ ಸೇರಿದಂತೆ ಸರ್ಕಾರಿ ದಾಖಲಾತಿಗಳಲ್ಲಿ ಕಾಡುಗೊಲ್ಲವೆಂದು ನಮೂದಿಸಲು ಒತ್ತಾಯಿಸಿ ಪ್ರತಿಭಟನೆ ನಡೆಸಿದ ಹಿನ್ನೆಲೆಯಲ್ಲಿ ತಹಶೀಲ್ದಾರ್ ರೇಹಾನ್ ಪಾಷ ಅಧ್ಯಕ್ಷತೆಯಲ್ಲಿ ಸೋಮವಾರ ತಾಲ್ಲೂಕು ಕಚೇರಿ ಸಭಾಂಗಣದಲ್ಲಿ ದಾಖಲಾತಿ ವಿತರಣೆಯ ಬಗ್ಗೆ ಪೂರ್ವಭಾವಿಸಭೆ ನಡೆಸಲಾಯಿತು.

ಕಾಡುಗೊಲ್ಲ ಸಂಘದ ತಾಲ್ಲೂಕು ಅಧ್ಯಕ್ಷ ಬೂದಿಹಳ್ಳಿರಾಜಣ್ಣ ಮಾತನಾಡಿ, ಹಿರಿಯೂರು ತಾಲ್ಲೂಕಿನಲ್ಲಿ 2021ರಲ್ಲಿಯೇ ನಮ್ಮ ಜನಾಂಗದ ಕೆಲವರಿಗೆ ಕಾಡುಗೊಲ್ಲ ಸಮುದಾಯವೆಂದು ನಮೂದಿಸಿ ದೃಢೀಕರಣ ಪತ್ರ ನೀಡಲಾಗಿದೆ. ಚಳ್ಳಕೆರೆ ತಾಲ್ಲೂಕಿನಲ್ಲೂ ಸಹ ಈ ವ್ಯವಸ್ಥೆಯನ್ನು ಮುಂದುವರೆಸಬೇಕೆಂದು ಸಮುದಾಯದ ವತಿಯಿಂದ ಎರಡ್ಮೂರು ಬಾರಿ ಪ್ರತಿಭಟನೆ ಮಾಡಿ ಮನವಿ ಅರ್ಪಿಸಲಾಗಿದೆ. ಆದರೆ, ತಾಲ್ಲೂಕು ಆಡಳಿತ ಈ ಬಗ್ಗೆ ಸರ್ಕಾರದ ಆದೇಶ ಬಂದ ನಂತರ ದೃಢೀಕರಣ ಪತ್ರ ನೀಡುವುದಾಗಿ ಭರವಸೆ ನೀಡಿದ್ದು, ಈ ದಿನ ಮತ್ತೊಮ್ಮೆ ಸಭೆ ಕರೆಯಲಾಗಿದೆ. ನಾನು ತಾಲ್ಲೂಕಿನ ಸಮಸ್ತ ಕಾಡುಗೊಲ್ಲ ಸಮುದಾಯದ ಪರವಾಗಿ ನಮ್ಮ ಬೇಡಿಕೆಯನ್ನು ಈಡೇರಿಸುವಂತೆ ಮತ್ತೊಮ್ಮೆ ಸಭೆಯಲ್ಲಿ ಮನವಿ ಮಾಡಿಕೊಳ್ಳುವುದಾಗಿ ತಿಳಿಸಿದರು. ಅಧ್ಯಕ್ಷತೆ ವಹಿಸಿದ್ದ ತಹಶೀಲ್ದಾರ್ ರೇಹಾನ್ ಪಾಷ ಮಾತನಾಡಿ, ಕಾಡುಗೊಲ್ಲ ಸಮುದಾಯದ ದೃಢೀಕರಣ ಪತ್ರವನ್ನು ಸರ್ಕಾರದಿಂದ ಯಾವುದೇ ರೀತಿಯ ಅಧಿಕೃತ ಆದೇಶವಿಲ್ಲದೆ ನೀಡಲು ಬರುವುದಿಲ್ಲ. ಪ್ರತಿಯೊಂದು ಹಂತದಲ್ಲೂ ನಾವು ಸರ್ಕಾರದ ಸೂಚನೆಯನ್ನು ಪಾಲಿಸಬೇಕು. ಕಾಡುಗೊಲ್ಲ ಸಮುದಾಯ ದೃಢೀಕರಣ ನೀಡುವ ಕುರಿತು ಕಂದಾಯ ಇಲಾಖೆ, ಸಮಾಜ ಕಲ್ಯಾಣ ಇಲಾಖೆ, ಪರಿಶಿಷ್ಟ ಪಂಗಡ ಇಲಾಖೆ ಹಾಗೂ ಹಿಂದುಳಿದ ವರ್ಗಗಳ ಇಲಾಖೆ ಅಧಿಕಾರಿಗಳ ಸಮಕ್ಷಮದಲ್ಲಿ ಜಂಟಿ ಸರ್ವೆ ನಡೆಸಿ ಸರ್ಕಾರಕ್ಕೆ ಮಾನ್ಯ ಜಿಲ್ಲಾಧಿಕಾರಿಗಳ ಮೂಲಕ ವರದಿ ನೀಡಲಾಗುವುದು.

ವಿಶ್ವ ಕೈ ತೊಳೆಯುವ ದಿನ ಕಾರ್ಯಕ್ರಮದಲ್ಲಿ ಡಿಹೆಚ್‌ಓ ಡಾ.ಜಿ.ಪಿ.ರೇಣುಪ್ರಸಾದ್

ಕೈ ತೊಳೆಯುವ ಮಹತ್ವದ ಬಗ್ಗೆ ಜಾಗೃತಿ ಅಗತ್ಯ

» ಚಿತ್ರದುರ್ಗ

ರೋಗಗಳ ತಡೆಗಟ್ಟಲು ಮತ್ತು ಜೀವಗಳನ್ನು ಉಳಿಸಲು ಪರಿಣಾಮಕಾರಿ ಮಾರ್ಗವಾಗಿ ಕೈ ತೊಳೆಯುವ ಮಹತ್ವದ ಬಗ್ಗೆ ಜಾಗೃತಿ ಅಗತ್ಯ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಜಿ.ಪಿ.ರೇಣುಪ್ರಸಾದ್ ಹೇಳಿದರು.

ನಗರದ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಸೋಮವಾರ ವಿಶ್ವ ಕೈ ತೊಳೆಯುವ ದಿನ ಮತ್ತು ರಾಷ್ಟ್ರೀಯ ಶ್ರವಣದೋಷ ನಿಯಂತ್ರಣ ಕಾರ್ಯಕ್ರಮದ ತರಬೇತಿ ಕಾರ್ಯಾಗಾರದಲ್ಲಿ ಅವರು ಮಾತನಾಡಿದರು.

ಕೈ ತೊಳೆಯುವ ಮಹತ್ವದ ಬಗ್ಗೆ ಜಾಗೃತಿ ಮತ್ತು ತಿಳುವಳಿಕೆಯನ್ನು ಹೆಚ್ಚಿಸುವ ಉದ್ದೇಶದಿಂದ ಅಕ್ಟೋಬರ್ 15 ಅನ್ನು ಜಾಗತಿಕ ಕೈ ತೊಳೆಯುವ ದಿನ ಎಂದು ಆಚರಿಸಲಾಗುತ್ತದೆ ಎಂದರು.

'ಸ್ವಚ್ಛವಾದ ಕೈಗಳು–ಸುಸ್ಥಿರ ಅಭಿವೃದ್ಧಿಯ ಕೀಲಿ ಕೈ' ಇದು 2023ರ ಘೋಷವಾಕ್ಯ. ಕೈ ತೊಳೆಯುವುದಕ್ಕೆ ಇಷ್ಟೊಂದು ಮಹತ್ವ ಏಕೆ? ಮಾನವನಿಗೆ ಬರುವ ಹಲವು ಕಾಯಿಲೆಗಳಿಗೆ ಸ್ವಚ್ಛವಾಗಿರದ ನಮ್ಮ ಕೈಗಳು ಕಾರಣ ಎಂಬುದು ಹಲವರಿಗೆ ತಿಳಿದಿಲ್ಲ. ವಿಶೇಷವಾಗಿ ಮನುಷ್ಯನ ಕರುಳಿನ ಸೋಂಕಿಗೆ ಕಾರಣವಾಗುವುದು ನಮ್ಮ ಕೈಯಲ್ಲಿರುವ ವೈರಾಣುಗಳು ದೇಹ ಸೇರುವುದರಿಂದ ನಾವು ನಿಮಿಷವೊಂದಕ್ಕೆ ಕನಿಷ್ಠ ಹತ್ತು ಬಾರಿ ಕೈಯಿಂದ ಮೂಗು, ಬಾಯಿ, ಕಣ್ಣುಗಳನ್ನು ನಮಗೆ ಅರಿವಿಲ್ಲದಂತೆ ಮುಟ್ಟಿಕೊಳ್ಳುತ್ತೇವೆ. ಇದರ ಪರಿಣಾಮವಾಗಿ ಕೈಯಲ್ಲಿರುವ ರೋಗಾಣುಗಳು ದೇಹ ಸೇರಿ ಹಲವು ಸೋಂಕಿಗೆ ಕಾರಣವಾಗುತ್ತವೆ ಎಂದರು.

ತಾಲ್ಲೂಕು ಆರೋಗ್ಯ ಶಿಕ್ಷಣಾಧಿಕಾರಿ ಎನ್.ಎಸ್.ಮಂಜುನಾಥ ಮಾತನಾಡಿ, ಕೈ ತೊಳೆಯುವುದು ಹಾಗೂ ವೈಯಕ್ತಿಕ ಸ್ವಚ್ಛತೆಗೆ ಆದ್ಯತೆ ನೀಡಬೇಕೆಂಬುದು ಈಗ ರೂಢಿಗೆ ಬಂದಿರುವುದಲ್ಲ. ವಿಶೇಷವಾಗಿ ಗ್ರಾಮೀಣ ಪ್ರದೇಶದಲ್ಲಿ ಮನೆಗೆ ಯಾರಾದರೂ ಹೊರಗಡೆಯಿಂದ ಬಂದಲ್ಲಿ ಕೈ–ಕಾಲು ತೊಳೆದುಕೊಳ್ಳಲು ನೀರು ಕೊಡುವ ಪದ್ಧತಿ ಜಾರಿಯಲ್ಲಿತ್ತು. ಕರೊನಾ ಇದನ್ನೆಲ್ಲ ನೆನಪಿಸಿ ಈ ಹಿಂದಿನ ರೂಢಿ ಮತ್ತೆ ಅನುಷ್ಠಾನಕ್ಕೆ ತರುವಂತೆ ಮಾಡುತ್ತಿದೆ. ಪ್ರತಿಯೊಬ್ಬರು ದಿನದಲ್ಲಿ 6–10 ಬಾರಿ ಕೈಗಳನ್ನು ತೊಳೆದುಕೊಳ್ಳಬೇಕು ಎಂದು ವಿಶ್ವವಿದ್ಯಾಲಯವೊಂದು ಸಂಶೋಧನೆಯಿಂದ ಕಂಡುಕೊಂಡಿದೆ. ವಿಶ್ವ ಆರೋಗ್ಯ ಸಂಸ್ಥೆಯ ಸಲಹೆ ಪ್ರಕಾರ ಆರು ಹಂತಗಳಲ್ಲಿ ವೈಜ್ಞಾನಿಕವಾಗಿ ಕೈ ತೊಳೆದುಕೊಳ್ಳುವುದರಿಂದ ಕರೊನಾ ಮಾತ್ರವಲ್ಲ, ಯಾವುದೇ ವೈರಾಣುಗಳು ನಮ್ಮ ಕೈ ಮೂಲಕ ದೇಹದೊಳಗೆ ಪ್ರವೇಶ ಮಾಡದಂತೆ ತಡೆಗಟ್ಟಬಹುದಾಗಿದೆ ಎಂದರು. ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಬಿ.ಮೂಗಪ್ಪ ಕೈ ತೊಳೆಯುವ ವಿಧಾನದ ಬಗ್ಗೆ ಪ್ರಾತ್ಯಕ್ಷಿಕೆ ನೀಡಿದರು. ನಂತರ ರಾಷ್ಟ್ರೀಯ ಶ್ರವಣದೋಷ ನಿಯಂತ್ರಣ ಮತ್ತು ನಿವಾರಣಾ ಕಾರ್ಯಕ್ರಮದಡಿ ಸಮುದಾಯ ಆರೋಗ್ಯ ಅಧಿಕಾರಿಗಳಿಗೆ ತರಬೇತಿ ನೀಡಲಾಯಿತು.

ಕಾರ್ಯಕ್ರಮದಲ್ಲಿ ಆಡಿಯೋಲಾಜಿಸ್ಟ್ ಚಂದನ್ ಕುಮಾರಿ, ಸಮುದಾಯ ಆರೋಗ್ಯ ಅಧಿಕಾರಿಗಳು ಇದ್ದರು.

ದಾವಣಗೆರೆ ಮಹಾನಗರ ಪಾಲಿಕೆ ಆವರಣದಲ್ಲಿರುವ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ನವೀಕರಣ ಕಚೇರಿಯಲ್ಲಿ ಪೂಜೆ ಮಾಡಲಾಯಿತು

ಮುದ್ರಣ ಮಾಧ್ಯಮ ತನ್ನ ಮೌಲ್ಯ ಕಳೆದುಕೊಂಡಿಲ್ಲ

» ದಾವಣಗೆರೆ

ದೃಶ್ಯ ಮಾಧ್ಯಮ ಮತ್ತು ಸಾಮಾಜಿಕ ಜಾಲತಾಣ ಮಾಧ್ಯಮ ಎಷ್ಟೇ ಪ್ರಭಾವಿಯಾಗಿದ್ದರೂ ಮುದ್ರಣ ಮಾಧ್ಯಮ ತನ್ನ ಮೌಲ್ಯಗಳನ್ನು ಕಳೆದುಕೊಂಡಿಲ್ಲ ಎಂದು ಹಿರಿಯ ಪತ್ರಕರ್ತರು ಹಾಗೂ ವ್ಯಂಗ್ಯಚಿತ್ರಕಾರರಾದ ಎಚ್.ಬಿ.ಮಂಜುನಾಥ್ ಹೇಳಿದರು.

ನಗರದ ಮಹಾನಗರ ಪಾಲಿಕೆ ಆವರಣದಲ್ಲಿರುವ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ದಾವಣಗೆರೆ ಜಿಲ್ಲಾ ಘಟಕದ ಕಚೇರಿಯ ನವೀಕರಣ ಪೂಜಾ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಪ್ರಜಾಪ್ರಭುತ್ವದ ಮೌಲ್ಯಗಳನ್ನು ಎತ್ತಿ ಹಿಡಿಯುವಲ್ಲಿ ಮುದ್ರಣ ಮಾಧ್ಯಮ ಪ್ರಮುಖ ಪಾತ್ರ ವಹಿಸುತ್ತಿದೆ. ರಾಜ್ಯಾಂಗ, ಕಾರ್ಯಾಂಗ, ಶಾಸಕಾಂಗಗಳು ಎಡವಿದಾಗ ಅವುಗಳನ್ನು ಎಚ್ಚರಿಸುವ ಕೆಲಸ ಮುದ್ರಣ ಮಾಧ್ಯಮ ಹಾಗೂ ದೃಶ್ಯ ಮಾಧ್ಯಮಗಳು ಮಾಡುತ್ತಿವೆ ಎಂದರು.

ಸಮಾಜದ ಒರೆಕೋರೆಗಳನ್ನು ತಿದ್ದಿತೀಡುವ ಕೆಲಸವನ್ನು ಪತ್ರಿಕೋದ್ಯಮ ಮಾಡುತ್ತಿದೆ. ಪತ್ರಕರ್ತರು ಕೂಡ ಸಾಮಾಜಿಕ ಕಳಕಳಿ ಹೊಂದಿ ಸಮಾಜ ಜಾಗೃತಗೊಳಿಸುವ ಜೊತೆಗೆ ಪ್ರಜಾಪ್ರಭುತ್ವದ ಮೌಲ್ಯಗಳನ್ನು ಎತ್ತಿ ಹಿಡಿಯುವ ಕೆಲಸ ಮಾಡಬೇಕು ಎಂದು ಪತ್ರಕರ್ತರಿಗೆ ಕಿವಿಮಾತು ಹೇಳಿದರು.

ದಾವಣಗೆರೆ ಕನ್ನಡ ಭಾರತಿ ದಿನ ಪತ್ರಿಕೆ ಸಂಪಾದಕ ಮಲ್ಲಿಕಾರ್ಜುನ್ ಕಬ್ಬೂರು ಮಾತನಾಡಿ, ಮಹಾನಗರಪಾಲಿಕೆ ಆವರಣದಲ್ಲಿರುವ ಕಾರ್ಯನಿರತ ಪತ್ರಕರ್ತರ ಸಂಘದ ಜಿಲ್ಲಾ ಘಟಕದ ಕಚೇರಿ ಮೊದಲು ನೋಡಲು ಧೂಳು ತುಂಬಿದ ಕಚೇರಿಯಾಗಿತ್ತು. ಕಸವನ್ನು ರಸ ಮಾಡಿದಂತೆ ಕಾರ್ಯನಿರತ ಪತ್ರಕರ್ತರ ಸಂಘದ ಜಿಲ್ಲಾ ಘಟಕದ ಪದಾಧಿಕಾರಿಗಳು ಕ್ರಿಯಾಶೀಲರಾಗಿ ಆ ಕಚೇರಿಯನ್ನು ಸುಸಜ್ಜಿತ ಕಚೇರಿಯನ್ನಾಗಿ ಮಾಡಿರುವುದು ಅಚ್ಚರಿ ತಂದಿದೆ. ಹೀಗೆಯೇ ಸಂಘದ ಚಟುವಟಿಕೆಗಳನ್ನು ಗಟ್ಟಿಗೊಳಿಸುವ ಕೆಲಸ ಮಾಡಿಕೊಂಡು ಸಂಘ ಉತ್ತುಂಗ ಮಟ್ಟಕ್ಕೇರಲಿ ಎಂದು ಶುಭ ಹಾರೈಸಿದರು.

ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಜಿಲ್ಲಾಧ್ಯಕ್ಷ ಇ.ಎಂ.ಮಂಜುನಾಥ್ ಮಾತನಾಡಿ, ಕಳೆದ 28 ವರ್ಷಗಳ ಹಿಂದೆ ಮಹಾನಗರಪಾಲಿಕೆ ಅವಣರದಲ್ಲಿ ಸಂಘದ ಕಚೇರಿ ಹೊಂದಿತ್ತು. ನಂತರ ದಿನಗಳಲ್ಲಿ ಕೆಲವು ಕಾರಣದಿಂದಾಗಿ ಸಂಘದ ಕಚೇರಿ ಬೇರೆಯ ಕಾರಣಕ್ಕೆ ಉಪಯೋಗಿಸಲಾಯಿತು. ಅಲ್ಲಿಂದ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘಕ್ಕೆ ಕಚೇರಿ ಇಲ್ಲದೆ ಬೇರೆ ಬೇರೆ ಸ್ಥಳಗಳಲ್ಲಿ ಸಂಘದ ಚಟುವಟಿಕೆಗಳನ್ನು ನಡೆಸಿಕೊಂಡು ಬರಲಾಗುತ್ತಿತ್ತು.

ಆದರೆ ಈ ಬಾರಿ ಸಂಘದ ಹೊಸ ಪದಾಧಿಕಾರಿಗಳ ತಂಡ ಬಂದ ಮೇಲೆ ಮಹಾನಗರ ಪಾಲಿಕೆ ಮೇಲೆ ಒತ್ತಡ ಹಾಕಿ ಮಹಾನಗರ ಪಾಲಿಕೆ ಆವರಣದಲ್ಲಿ ತಾತ್ಕಾಲಿಕ ಕಚೇರಿ ಪಡೆದು ಅದನ್ನು ನವೀಕರಣ ಮಾಡಿ ಆ ಮೂಲಕ ಸಂಘದ ಚಟುವಟಿಕೆಗಳನ್ನು ಸಂಘದ ಎಲ್ಲಾ ಪದಾಧಿಕಾರಿಗಳು ಸಕ್ರಿಯವಾಗಿ ಕಾರ್ಯನಿರ್ವಹಿಸಿಕೊಂಡು ಹೋಗುತ್ತಿದ್ದಾರೆ ಎಂದು ಸಂತಸ ವ್ಯಕ್ತಪಡಿಸಿದರು.

ಹಿರಿಯ ಪತ್ರಕರ್ತರಾದ ಬಾ.ಮ.ಬಸವರಾಜ್ ,ಸಂಯುಕ್ತ ಕರ್ನಾಟಕ ಹಿರಿಯ ಉಪಸಂಪಾದಕ ಮಂಜುನಾಥ್ ಕಾಡಜ್ಜಿ ಮಾತನಾಡಿದರು.

ಈ ಸಂದರ್ಭದಲ್ಲಿ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ರಾಜ್ಯ ಸಮಿತಿ ಸದಸ್ಯ ಕೆ.ಚಂದ್ರಣ್ಣ, ರಾಷ್ಟ್ರೀಯ ಸಮಿತಿ ಸದಸ್ಯ ಎಸ್. ಕೆ.ಒಡೆಯರ್, ಸಂಘದ ಪ್ರಧಾನ ಕಾರ್ಯದರ್ಶಿ ಎ.ಫಕೃದ್ದೀನ್, ಖಜಾಂಚಿ ಬದರೀನಾಥ್, ಉಪಾಧ್ಯಕ್ಷರಾದ ಎಚ್.ಎನ್.ಪ್ರಕಾಶ್, ಆರ್. ಎಸ್.ತಿಪ್ಪೇಸ್ವಾಮಿ, ಕಾರ್ಯದರ್ಶಿಗಳಾದ ಜೆ.ಎಸ್.ವೀರೇಶ್, ನಿಂಗೋಜಿರಾವ್, ಸಿ.ವೇದ ಮೂರ್ತಿ, ಪತ್ರಕರ್ತರಾದ ಎ.ಎನ್.ನಿಂಗಪ್ಪ, ವಿನಾಯಕ ಪೂಜಾರಿ, ವಿಷ್ಣುಹೆರಬಾಳು, ಬಸವರಾಜ್, ಪಾಪು ಗುರು ಇನ್ನಿತರರಿದ್ದರು.

ಜ್ಞಾನ ಹೆಚ್ಚಿಸಿಕೊಳ್ಳಲು ಕಾರ್ಯಗಾರಗಳು ಅತ್ಯವಶ್ಯ: ರಾಜೇಶ್ವರಿ ಎನ್.ಹೆಗಡೆ

» ದಾವಣಗೆರೆ

ಕಾನೂನು ಕಾರ್ಯಾಗಾರಗಳು ಯುವ ವಕೀಲರ ಅಧ್ಯಯನಕ್ಕೆ ಅತ್ಯಂತ ಅವಶ್ಯಕವಾಗಿದ್ದು, ಕಾರ್ಯಾಗಾರಗಳಲ್ಲಿ ಭಾಗವಹಿಸುವ ಮೂಲಕ ತಮ್ಮ ಜ್ಞಾನ ಸಂಪತ್ತನ್ನು ಹೆಚ್ಚಿಸಿಕೊಂಡು ಪ್ರಕರಣಗಳ ವಿಲೇವಾರಿಗೆ ಮುಂದಾಗಬೇಕೆಂದು ಪ್ರಧಾನ ಜಿಲ್ಲಾ ಸತ್ರ ನ್ಯಾಯಾಧೀಶೆ ರಾಜೇಶ್ವರಿ ಎನ್.ಹೆಗಡೆ ಸಲಹೆ ನೀಡಿದರು.

ಶುಕ್ರವಾರ ದಾವಣಗೆರೆ ಜಿಲ್ಲಾ ವಕೀಲರ ಸಘದಿಂದ ನಗರದ ದೇವರಾಜ ಅರಸು ಬಡಾವಣೆಯ ಜಿಲ್ಲಾ ನ್ಯಾಯಾಲಯಗಳ ಸಂಕೀರ್ಣದಲ್ಲಿನ ವಕೀಲರ ಸಾಂಸ್ಕೃತಿಕ ಸಮುದಾಯ ಭವನದಲ್ಲಿ ಆಯೋಜಿಸಲಾಗಿದ್ದ ಉಪನ್ಯಾಸ ಮಾಲಿಕೆಯಲ್ಲಿ ಗ್ರಾಹಕರ ಸಂರಕ್ಷಣಾ ಕಾಯ್ದೆ –2019 ಕುರಿತು ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಸಂವಿಧಾನದ ಯಾವುದೇ ರಾಷ್ಟ್ರದಲ್ಲಿ ತನ್ನ ಸಂವಿಧಾನದ ಚೌಕಟ್ಟಿನೊಳಗೆ ಕಾಲಕಾಲಕ್ಕೆ ಕಾನೂನುಗಳನ್ನು ಜಾರಿಗೆ ತಂದು ಜನರ ಹಕ್ಕುಗಳನ್ನು ಕಾಪಾಡಲಾಗುತ್ತದೆ. ಆಧುನಿಕ ಜಗತ್ತಿನಲ್ಲಿ ಕಾನೂನುಗಳ ಬಗ್ಗೆ ತಿಳಿದುಕೊಳ್ಳಲು ಅತ್ಯಂತ ಅವಶ್ಯಕವಿದ್ದು, ಈ ನಿಟ್ಟಿನಲ್ಲಿ ಜಿಲ್ಲಾ ವಕೀಲರ ಸಂಘವು ಉಪನ್ಯಾಸಗಳನ್ನು ಏರ್ಪಡಿಸುತ್ತಿರುವುದು ಶ್ಲಾಘನೀಯ. ಕಾನೂನು ನಿರಂತರವಾಗಿ ಬದಲಾಗುವ ಮತ್ತು ವಿಕಸನಗೊಳ್ಳುವ ವಿಷಯವಾಗಿರುವುದರಿಂದ ಅವುಗಳ ಅಧ್ಯಯನ ಮಾಡಲು ಮತ್ತು ತಿಳಿದುಕೊಳ್ಳಲು ಉಪನ್ಯಾಸ ಮಾಲಿಕೆಗಳು ಅವಶ್ಯಕವಾಗಿದೆ ಎಂದು ಹೇಳಿದರು.ಜಿಲ್ಲಾಧಿಕಾರಿ ಡಾ.ಎಂ.ವಿ.ವೆಂಕಟೇಶ್, ವಕೀಲರ ಜ್ಞಾನ ಸಂಪತ್ತು ಹೆಚ್ಚುವುದರಿಂದ ಸಮಾಜಕ್ಕೆ, ಪ್ರಕರಣಗಳಿಗೆ ನ್ಯಾಯ ದೊರಕಿಸಲು ಸಾಧ್ಯವಾಗುತ್ತದೆ. ಗ್ರಾಹಕರ ಹಿತರಕ್ಷಣಾ ಕಾಯಿದೆ ಗ್ರಾಹಕರ ಸಂರಕ್ಷಣೆ ಹಿತದ ಹಿನ್ನೆಲೆಯಲ್ಲಿ ಆದ ಕಾನೂನು ಎಂದು ತಿಳಿಸಿದರು. ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಉಮಾ ಪ್ರಶಾಂತ್ ಮಾತನಾಡಿ, ನ್ಯಾಯಯುತ ಸಮಾಜ ನಿರ್ಮಾಣ ಮಾಡುವಲ್ಲಿ, ಶಾಂತಿ, ಸುವ್ಯವಸ್ಥೆ ಕಾಪಾಡುವಲ್ಲಿ ವಕೀಲರ ಸಹಕಾರ ಮುಖ್ಯವಾಗಿದ್ದು, ನ್ಯಾಯಾಂಗ ಮತ್ತು ಕಾರ್ಯಾಂಗಗಳು ಸೌಹಾರ್ದಯುತವಾಗಿ ಉತ್ತಮ ಸಮಾಜದ ನಿರ್ಮಾಣಕ್ಕೆ ಕಾರ್ಯೋನ್ಮುಖರ

ಫಾಸ್ಟ್ ನ್ಯೂಸ್

ವಿಶ್ವ ಮಾನವ ಶಾಲೆಯಲ್ಲಿ ಆರೋಗ್ಯ ತಪಾಸಣೆ

» ಚಿತ್ರದುರ್ಗ

ವಿಶ್ವಮಾನವ ಸಾಂಸ್ಕೃತಿಕ ಮತ್ತು ವಿದ್ಯಾಸಂಸ್ಥೆ(ರಿ)ಸೀಬಾರ–ಗುತ್ತಿನಾಡು ಸಂಸ್ಥೆಯ ರಜತ ಮಹೋತ್ಸವದ ಅಂಗವಾಗಿ ಸಪ್ತಗಿರಿ ಆಸ್ಪತ್ರೆ ಬೆಂಗಳೂರು ಇವರ ಸಹಯೋಗದಲ್ಲಿ ದಿನಾಂಕ:15–10–2023ರ ಭಾನುವಾರದಂದು ಉಚಿತ ಹೃದಯರೋಗ, ನರರೋಗ, ಮೂತ್ರಪಿಂಡದ ಕಲ್ಲು, ಕ್ಯಾನ್ಸರ್ ಹಾಗೂ ಸಾಮಾನ್ಯ ಕಾಯಿಲೆಗಳಾದ ಸ್ತ್ರೀರೋಗ ಮತ್ತು ಗರ್ಭಕೋಶ ತೊಂದರೆ, ಮೂಳೆ ಮತ್ತು ಕೀಲು ರೋಗ, ಕಿವಿ, ಮೂಗು, ಗಂಟಲು, ರಕ್ತದೊತ್ತಡ, ಸಕ್ಕರೆ ಕಾಯಿಲೆ ಮುಂತಾದವುಗಳ ತಪಾಸಣಾ ಶಿಬಿರವನ್ನು ಹಮ್ಮಿಕೊಳ್ಳಲಾಗಿತ್ತು. ಹಾಗೆಯೇ ಬಸವೇಶ್ವರ ವೈದ್ಯಕೀಯ ಕಾಲೇಜು ಮತ್ತು ಆಸ್ಪತ್ರೆ ಚಿತ್ರದುರ್ಗ, ಇವರ ಸಹಯೋಗದಲ್ಲಿ ಉಚಿತ ಕಣ್ಣಿನ ತಪಾಸಣಾ ಶಿಬಿರ" ವನ್ನು ಸಂಸ್ಥೆಯ ಆವರಣದಲ್ಲಿ ಹಮ್ಮಿಕೊಳ್ಳಲಾಗಿತ್ತು, ಸದರಿ ಶಿಬಿರಕ್ಕೆ ಜಿಲ್ಲೆಯ ಸುತ್ತಮುತ್ತಲಿನ ಹಳ್ಳಿಗಳಿಂದ ಸುಮಾರು 500ಕ್ಕೂ ಹೆಚ್ಚು ಸಾರ್ವಜನಿಕರು, ನಮ್ಮ ವಿದ್ಯಾ ಸಂಸ್ಥೆಯಲ್ಲಿ ಅಭ್ಯಸಿಸುವ ವಿದ್ಯಾರ್ಥಿಗಳ ಪೋಷಕರು, ಹಾಗೂ ವಿದ್ಯಾರ್ಥಿಗಳು ಆಗಮಿಸಿ ಈ ಶಿಬಿರದ ಸದುಪಯೋಗವನ್ನು ಪಡಿಸಿಕೊಂಡರು.30ಕ್ಕೂ ಹೆಚ್ಚು ರೋಗಿಗಳನ್ನು ಸಪ್ತಗಿರಿ ಆಸ್ಪತ್ರೆ ಬೆಂಗಳೂರು ಇಲ್ಲಿಗೆ ಹೆಚ್ಚಿನ ಶಸ್ತ್ರಚಿಕಿತ್ಸೆಗಾಗಿ ಕರೆಯಲಾಯಿತು.

ಹೊಸದುರ್ಗ ದಸರಾ ಉತ್ಸವಕ್ಕೆ ಚಾಲನೆ

» ಹೊಸದುರ್ಗ

ಪಟ್ಟಣದ ಅಶೋಕ ರಂಗಮಂದಿರದಲ್ಲಿ ದುರ್ಗಾ ಸೇವಾ ಸಮಿತಿ ವತಿಯಿಂದ ಪ್ರತಿ ವರ್ಷ ದಸರಾ ಹಬ್ಬದ ಸಂದರ್ಭದಲ್ಲಿ ದಸರಾ ಉತ್ಸವವನ್ನು ಆಚರಿಸಿಕೊಂಡು ಬಂದಿದ್ದು, ಅದರಂತೆಯೇ ಈ ವರ್ಷವೂ ಶ್ರೀ ದುರ್ಗಾಪರಮೇಶ್ವರಿ ಅಮ್ಮನವರ ಮೂರ್ತಿಯನ್ನು ಶಾಸ್ತ್ರೋಪ್ತವಾಗಿ ಪ್ರತಿಷ್ಠಾಪನೆ ಮಾಡುವ ಮೂಲಕ 6ನೇ ವರ್ಷದ ದಸರಾ ಉತ್ಸವಕ್ಕೆ ವಿದ್ಯುಕ್ತವಾಗಿ ಭಾನುವಾರ ಚಾಲನೆ ನೀಡಲಾಯಿತು. ಈ ಬಾರಿ ಅಮ್ಮನವರ ಮೂರ್ತಿ ಪ್ರತಿಷ್ಠಾಪನೆಗೆ ಮಂಟಪವನ್ನು ಕಪ್ಪು ಮತ್ತು ತಾಮ್ರ ಮಿಶ್ರಿತ ಬಣ್ಣದ ಲೇಪನದಿಂದ ಅಲಂಕಾರ ಮಾಡಲಾಗಿತ್ತು. ಅಮ್ಮನವರ ಮೂರ್ತಿ ಪ್ರತಿಷ್ಠಾಪನೆಗೂ ಮುನ್ನ ಗ್ರಾಮ ದೇವತೆ ಶ್ರೀ ದುರ್ಗಾಂಭಿಕ ದೇವಿ ಹಾಗೂ ವಿನಾಯಕನಿಗೆ ಪೂಜೆ ಸಲ್ಲಿಸಲಾಯಿತು. ಪ್ರತಿಷ್ಠಾಪನೆಯ ನಂತರ ಶ್ರೀ ದುರ್ಗಾಪರಮೇಶ್ವರಿ ಅಮ್ಮನವರಿಗೆ ಪ್ರಾಣ ಪ್ರತಿಷ್ಠೆ, ಅಷ್ಟೋತ್ತರ, ಮಹಾಮಂಗಳಾರತಿ ಮತ್ತು ಇನ್ನಿತರ ಧಾರ್ಮಿಕ ಪೂಜಾ ಕಾರ್ಯಕ್ರಮಗಳು ನಡೆದವು. ಇನ್ನೂ ಈ ಬಾರಿ ಪಟ್ಟಣದ ಪ್ರಮುಖ ರಸ್ತೆಗಳನ್ನು ಬಗೆ ಬಗೆಯ ವಿದ್ಯುತ್ ದೀಪಗಳಿಂದ, ಹಸಿರು ತಳಿರು ತೋರಣಗಳಿಂದ ಅಲಂಕಾರ ಮಾಡಲಾಗಿತ್ತು. ಸ್ಥಳೀಯ ಭಜನಾ ಮಂಡಳಿ ವತಿಯಿಂದ ದೇವಿ ಸ್ತುತಿ, ದುರ್ಗಾ ಕವಚ ಮತ್ತು ಲಲಿತಾ ಸಹಸ್ರನಾಮ ಪಠಿಸಲಾಯಿತು. ಇದೇ ಸಂದರ್ಭದಲ್ಲಿ ಸಾವಿರಾರು ಭಕ್ತರು ದೇವಿಯ ದರ್ಶನ ಪಡೆದರು.

ವಿದ್ಯುತ್ ವ್ಯತ್ಯಯ

» ದಾವಣಗೆರೆ

66/11 ಕೆವಿ ಅವರಗೆರೆ ವಿದ್ಯುತ್ ವಿತರಣಾ ಕೇಂದ್ರದಿಂದ ಹೊರುಡುವ ಎಫ್18–ದುರ್ಗಾಂಬಿಕಾ ಫೀಡರ್ ಮಾರ್ಗದ ವ್ಯಾಪಿಯಲ್ಲಿ ತುರ್ತು ಕಾಮಗಾರಿಯನ್ನು ನಿರ್ವಹಿಸಬೇಕಾಗಿರುವುದರಿಂದ ಅ.17 ರಂದು ಬೆಳಿಗ್ಗೆ 10 ರಿಂದ ಸಂಜೆ 4 ಗಂಟೆಯವರೆಗೆ ಎಫ್18–ದುರ್ಗಾಂಬಿಕಾ ಫೀಡರ್ ವ್ಯಾಪ್ತಿಯ ಎಮ್.ಬಿ ಕೇರಿ, ಹೊಂಡದ ಸರ್ಕಲ್ ಸುತ್ತಮುತ್ತ, ಕಾಯಿಪೇಟೆ, ಜಾಲಿನಗರ, ಟೀಚರ್ ಕಾಲೋನಿ, ಶಿವಾಜಿ ನಗರ, ಶಿವಾಜಿ ಸರ್ಕಲ್, ಚಲುವಾದಿ ಕೇರಿ, ಇಡಬ್ಲ್ಯೂಎಸ್ ಕಾಲೋನಿ, ಹಳೇಪೇಟೆ, ಬಾರ್‌ಲೈನ್ ರಸ್ತೆ, ಹಾಗೂ ಇತರೆ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ ಎಂದು ಬೆಸ್ಕಾಂ ಪ್ರಕಟಣೆ ತಿಳಿಸಿದೆ.

ವಿದ್ಯಾರ್ಹತೆಯೊಂದಿಗೆ ವೃತ್ತಿ ನೈಪುಣ್ಯತೆ ಅಗತ್ಯ: ಎಸ್.ಎಸ್ ಮಲ್ಲಿಕಾರ್ಜುನ್

ದಾವಣಗೆರೆಯಲ್ಲಿ ಬೃಹತ್ ಉದ್ಯೋಗ ಮೇಳ

» ದಾವಣಗೆರೆ

ಪ್ರಸ್ತುತ ಕಾಲಮಾನದಲ್ಲಿ ವಿದ್ಯಾರ್ಹತೆ ಜೊತೆಗೆ ಔದ್ಯೋಗಿಕ ಕ್ಷೇತ್ರಕ್ಕೆ ಬೇಕಿರುವ ಕೌಶಲ್ಯ, ವೃತ್ತಿ ನೈಪುಣ್ಯತೆ ಹೊಂದುವುದು ಅತಿ ಅವಶ್ಯವಾಗಿದೆ ಎಂದು ಜಿಲ್ಲಾ ಉಸ್ತುವಾರಿ ಸಚಿವರಾದ ಎಸ್.ಎಸ್ ಮಲ್ಲಿಕಾರ್ಜುನ್ ಹೇಳಿದರು.

ಸೋಮವಾರ (16) ರಂದು ನಗರದ ಹೈಸ್ಕೂಲ್ ಮೈದಾನ ಸರ್ಕಾರಿ ಪದವಿಪೂರ್ವ ಕಾಲೇಜಿನಲ್ಲಿ ಆಯೋಜಿಸಲಾಗಿದ್ದ ಜಿಲ್ಲಾ ಮಟ್ಟದ ಬೃಹತ್ ಉದ್ಯೋಗಮೇಳ ಸಮಾರಂಭ ಉದ್ಘಾಟಿಸಿ ಅವರು ಮಾತನಾಡಿದರು.

ಪ್ರಪಂಚದಲ್ಲಿ ಜನಸಂಖ್ಯೆ ಹೆಚ್ಚಿರುವ ಎರಡನೇ ದೇಶವಾಗಿದ್ದು, ಜಿಡಿಪಿ 5ನೇ ಸ್ಥಾನದಲ್ಲಿದೆ. ಅದರೂ ಸಹ ಇಲ್ಲಿನ ಉದ್ಯೋಗ ಸೃಜನತೆ ಹೆಚ್ಚಿನ ನಿರುದ್ಯೋಗ ಪ್ರಮಾಣ ಚರ್ಚಿತ ವಿಷಯವಾಗಿದೆ. ದೇಶದಲ್ಲಿ ಯುವಜನತೆ ಪ್ರಮಾಣ ಹೆಚ್ಚಿದೆ. ಅಲ್ಲದೆ ಇಲ್ಲಿ ಉತ್ಪಾದಕತೆ, ಯುವ ಮಾನವ ಸಂಪನ್ಮೂಲ ಮತ್ತು ಖರೀದಿ ಸಾಮರ್ಥ್ಯ ಅಧಿಕವಾಗಿರುವುದನ್ನು ಗಮನಿಸಿಯೇ, ವಿದೇಶಗಳ ಹಲವು ಕಂಪನಿಗಳು ಭಾರತದಲ್ಲಿ ಬಂಡವಾಳ ಹೂಡಲು ಆಸಕ್ತಿ ತೋರುತ್ತವೆ. ಹೀಗಾಗಿ ನಮ್ಮಲ್ಲಿನ ಯುವಜನತೆಯಲ್ಲಿ ವೃತ್ತಿ ನೈಪುಣ್ಯತೆ, ತಂತ್ರಜ್ಞಾನ, ಕೌಶಲ್ಯ ಹೆಚ್ಚಾಗಬೇಕು. ಇದನ್ನು ಮನಗಂಡಿರುವ ಸರ್ಕಾರ ದೀನ್ ದಯಾಳ್ ಗ್ರಾಮೀಣ ಕೌಶಲ್ಯ ಯೋಜನೆ ಜಾರಿಗೊಳಿಸಿ, ಗ್ರಾಮೀಣ ಯುವಜನತೆಗೆ ಕೌಶಲ್ಯ ತರಬೇತಿ ಕೊಟ್ಟು, ಅವರಿಗೆ ಉದ್ಯೋಗ ದೊರಕಿಸಿಕೊಡವಂತಹ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸಲಾಗುತ್ತಿದೆ ಎಂದರು. ಈ ಉದ್ಯೋಗ ಮೇಳವು ಪ್ರತಿ ಆರು ತಿಂಗಳಿಗೊಮ್ಮೆ ನಡೆಸಲಾಗುತ್ತದೆ. ಈ ಮೂಲಕ ಸ್ಥಳದಲ್ಲಿಯೇ ಉದ್ಯೋಗಾಂಕ್ಷಿಗಳಿಗೆ ಉದ್ಯೋಗ ದೊರಕಿಸಲಾಗುತ್ತದೆ. ಈ ಮೇಳದ ಸದುಪಯೋಗವನ್ನು ಜಿಲ್ಲೆಯ ಯುವಜನತೆ ಮಾಡಿಕೊಳ್ಳಬೇಕೆಂದರು. ಹಲವಾರು ಜನರಿಗೆ ಎಸ್.ವಿ ಇಂಡಿಯಾನ್ ಕಂಪನಿ, ಸರ್ವೇ ಇಂಡಿಯಾನ್ ಕಂಪನಿ, ಮತ್ತು ವಿಶ್ರಾ ಕಂಪನಿಗಳಿಂದ ಒಪ್ಪಿಗೆ ಪತ್ರ (ಆಫರ್ ಲೇಟರ್) ನೀಡಲಾಯಿತು.

ಜಿಲ್ಲಾಧಿಕಾರಿ ಡಾ.ವೆಂಕಟೇಶ್. ಎಂ.ವಿ ಪ್ರಾಸ್ತವಿಕವಿಕವಾಗಿ ಮಾತಾನಾಡಿ, ಈ ಕಾರ್ಯಕ್ರಮವನ್ನು ಆಯೋಜಿಸಲು ಜಿಲ್ಲಾ ಉಸ್ತುವಾರಿ ಸಚಿವರಾದ ಎಸ್.ಎಸ್. ಮಲ್ಲಿಕಾರ್ಜುನ್ ಅವರಿಗೆ ಅಭಿನಂದನೆ ಸಲ್ಲಿಸಿದರು. ಉದ್ಯೋಗ ಎನ್ನುವುದು ಪ್ರತಿಯೊಬ್ಬರಿಗೂ ಅತ್ಯವಶ್ಯಕ ಎಂದರು ಪದವಿ ಮುಗಿದ ನಂತರ ಮುಂದೆನೂ ಅಂತ ಯೋಚನೆ ಮಾಡುತ್ತಿರುವ ನಿರುದ್ಯೋಗಿಗಳಿಗೆ ಈ ಉದ್ಯೋಗ ಮೇಳ ತುಂಬಾ ಉಪಯುಕ್ತವಾಗಿದೆ. ಉದ್ಯೋಗಮೇಳದಲ್ಲಿ ಭಾಗವಹಿಸಲು ಅಭ್ಯರ್ಥಿಗಳಿಗೆ ಆನ್‌ಲೈನ್‌ನಲ್ಲಿ ನೊಂದಣಿ ಹಾಗೂ ನೇರವಾಗಿ ಮೇಳದಲ್ಲಿ ನೊಂದಣಿ ಮಾಡಿಕೊಳ್ಳಲು ಅವಕಾಶ ಕಲ್ಪಿಸಲಾಗಿತ್ತು. ಕಾಲಮಾನಕ್ಕೆ ತಕ್ಕಂತೆ ವಿದ್ಯಾರ್ಥಿಗಳು ತಮ್ಮ ಕೌಶಲ್ಯ, ನೈಪುಣ್ಯತೆ, ತಂತ್ರಜ್ಞಾನಗಳನ್ನು ಮೈಗೂಡಿಸಿಕೊಂಡು ಅಪ್‌ಡೇಟ್ ಆಗಬೇಕು. ದಿನೇ ದಿನೇ ಜ್ಞಾನ, ಕೌಶಲ್ಯ ಹೆಚ್ಚಾಗಬೇಕು. ಆಗ ಮಾತ್ರ ಉದ್ಯೋಗ ಪಡೆಯುವ ಸಾಧ್ಯತೆಗಳು ಹೆಚ್ಚಾಗುತ್ತವೆ. ಇಂದಿನ ಯುವಜನತೆ ಬಹಳಷ್ಟು ಬುದ್ಧಿವಂತಿಕೆ ಹೊಂದಿದ್ದು, ನಮ್ಮ ದೇಶದ ಅರ್ಥ ವ್ಯವಸ್ಥೆಯನ್ನು ಉತ್ತುಂಗಕ್ಕೆ ತರುವಂತಹ ಸಾಮರ್ಥ್ಯ ಅವರಿಗಿದೆ ಎಂದರು. ಸುಮಾರು 1300 ಜನ ಆಪ್‌ಲೈನ್‌ನಲ್ಲಿ ನೊಂದಾಯಿಸಿರುತ್ತಾರೆ. 1050 ಜನ ಕ್ಯೂ.ಆರ್ ಕೋಡ್ ಮೂಲಕ ನೊಂದಾಯಿಸಿದ್ದು, ಜಿಲ್ಲೆಯಲ್ಲಿ ಸುಮಾರು 1000 ಕ್ಕೂ ಹೆಚ್ಚಿನ ಅಭ್ಯರ್ಥಿಗಳಿಗೆ ಉದ್ಯೋಗ ದೊರಕಿಸಲಾಗಿದೆ. ಇದೀಗ ದಾವಣಗೆರೆಯಲ್ಲಿ ಹಮ್ಮಿಕೊಂಡಿರುವ ಉದ್ಯೋಗ ಮೇಳದಲ್ಲಿ ಸುಮಾರು 75 ಕಂಪನಿಗಳು ಉದ್ಯೋಗ, ತರಬೇತಿಗೆ ಮುಂದಾಗಿದ್ದು, ಮುಂದಿನ ದಿನಗಳಲ್ಲಿ ಜಿಲ್ಲೆಯಲ್ಲಿ ಇನ್ನೂ ಹೆಚ್ಚಿನ ಪ್ರಮಾಣದಲ್ಲಿ ಉದ್ಯೋಗಮೇಳ ಆಯೋಜಿಸುವ ಉದ್ದೇಶವಿದೆ ಎಂದರು.

ಪಾಲಿಕೆ ಮಹಾಪೌರರಾದ ವಿನಾಯಕ ಬಿ.ಹೆಚ್, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಸುರೇಶ್ ಬಿ ಇಟ್ನಾಳ್, ಮಹಾನಗರ ಪಾಲಿಕೆ ಆಯುಕ್ತೆ ರೇಣುಕಾ, ಕೌಶಲ್ಯಾಭಿವೃದ್ಧಿ ಅಧಿಕಾರಿ ಬಸವನಗೌಡ, ದಾವಣಗೆರೆ ತಾಲ್ಲೂಕು ತಹಶಿಲ್ದಾರ್ ಡಾ. ಅಶ್ವತ್ ಎಂ.ಬಿ, ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

ಸ್ವಯಂ ಪ್ರೇರಿತರಾಗಿ ರಕ್ತದಾನ ಮಾಡಿ, ಜೀವ ಉಳಿಸಿ: ಸುರೇಶ್ ಬಿ. ಇಟ್ನಾಳ್

» ದಾವಣಗೆರೆ

ಇತ್ತೀಚಿನ ದಿನಗಳಲ್ಲಿ ಅಪಘಾತ ಹಾಗೂ ತುರ್ತು ಪರಿಸ್ಥಿತಿಗಳು ಹೆಚ್ಚಾಗುತ್ತಿದ್ದು ರಕ್ತವು ಅವಶ್ಯಕವಾಗಿ ಬೇಕಾಗಿದೆ. ಒಂದು ಜೀವ ಉಳಿಸುವ ನಿಟ್ಟಿನಲ್ಲಿ ಎಲ್ಲಾರೂ ಸ್ವಯಂ ಪ್ರೇರಿತರಾಗಿ ರಕ್ತದಾನ ಮಾಡಬೇಕು ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಸುರೇಶ್ ಬಿ ಇಟ್ನಾಳ್ ತಿಳಿಸಿದರು.

ಸೋಮವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಹಾಗೂ ವಿವಿಧ ಇಲಾಖೆಗಳ ಸಹಯೋಗದೊಂದಿಗೆ ನಗರದ ಚಿಗಟೇರಿ ಜಿಲ್ಲಾ ಆಸ್ಪತ್ರೆ ಆವರಣದಲ್ಲಿ ಜರುಗಿದ ರಾಷ್ಟ್ರೀಯ ಸ್ವಯಂ ಪ್ರೇರಿತ ರಕ್ತದಾನ ದಿನಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ರಾಷ್ಟ್ರೀಯ ಸ್ವಯಂ ಪ್ರೇರಿತ ರಕ್ತದಾನ ದಿನಾಚರಣೆ ಅತ್ಯಂತ ಮಹತ್ವವಾದ ಕಾರ್ಯಕ್ರಮವಾಗಿದ್ದು, ಒಂದು ಜೀವ ಉಳಿಸುವುದಕ್ಕೆ ರಕ್ತವು ಅವಶ್ಯಕವಾಗಿ ಬೇಕಾಗಿದೆ. 18 ರಿಂದ 65 ವರ್ಷದೊಳಗಿನ ಎಲ್ಲರೂ ಸ್ವಯಂ ಪ್ರೇರಿತರಾಗಿ ವರ್ಷಕ್ಕೆ ಮೂರು ಅಥವಾ ನಾಲ್ಕು ಬಾರಿ ರಕ್ತದಾನ ಮಾಡಬಹುದು. ಒಬ್ಬ ವ್ಯಕ್ತಿ ರಕ್ತದಾನ ಮಾಡಿದಾಗ ಕನಿಷ್ಠ ನಾಲ್ಕು ಜನರ ಜೀವಕ್ಕೆ ರಕ್ಷಣೆಯಾಗುತ್ತದೆ ಎಂದರು.

ಜನರು ಸಂತೋಷದಿಂದ ಸಾಧ್ಯವಾದಷ್ಟು ಜನರ ಜೀವ ಉಳಿಸುವ ದೃಷ್ಟಿಕೋನದಿಂದ ಸ್ವಯಂ ಪ್ರೇರಿತರಾಗಿ ರಕ್ತದಾನ ಮಾಡಬೇಕಾಗಿದೆ. ಇತ್ತೀಚಿನ ದಿನಗಳಲ್ಲಿ ಎಲ್ಲರಿಗೂ ಕೊಬ್ಬಿನಾಂಶ ಹೆಚ್ಚಾಗಿದ್ದು, ರಕ್ತದಾನ ಮಾಡುವ ಮೂಲಕ ಕೊಬ್ಬಿನಾಂಶ ಕಡಿಮೆ ಮಾಡಬಹುದು. ಜಿಲ್ಲೆಯಲ್ಲಿ 9 ಬ್ಲಡ್ ಬ್ಯಾಂಕುಗಳಿದ್ದು, ಗುರಿಯಂತೆ 14,135 ಯೂನಿಟ್ ನಷ್ಟು ರಕ್ತವನ್ನು ಸಂಗ್ರಹಿಸಲಾಗಿದೆ. ಎರಡು ವರ್ಷಗಳ ಹಿಂದೆ ರಾಜ್ಯದಲ್ಲಿಯೇ ಎರಡನೇ ಅತಿ ಹೆಚ್ಚು ರಕ್ತದ ಮಾದರಿಯನ್ನು ಸಂಗ್ರಹಿಸಿರುವ ಜಿಲ್ಲೆಯಾಗಿದೆ. ಪ್ರತಿ ಗ್ರಾಮ ಪಂಚಾಯಿತಿ ಪಿ.ಡಿ.ಒಗಳು ಪಂಚಾಯತಿ ವ್ಯಾಪ್ತಿಯಲ್ಲಿ ಕನಿಷ್ಠ ವರ್ಷಕ್ಕೆ ಎರಡು ಬಾರಿ ರಕ್ತದಾನ ಶಿಬಿರಗಳನ್ನು ಹಮ್ಮಿಕೊಳ್ಳಬೇಕು ಎಂದರು. ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಎಸ್. ಷಣ್ಮುಖಪ್ಪ ಮಾತನಾಡಿ ಜಿಲ್ಲೆಯಲ್ಲಿ ರಕ್ತದ ಅವಶ್ಯಕತೆ ಹೆಚ್ಚಾಗಿದ್ದು, ಎಲ್ಲಾ ಬ್ಲಡ್ ಬ್ಯಾಂಕ್‌ಗಳು ನಗರ ಹಾಗೂ ಗ್ರಾಮೀಣ ಪ್ರದೇಶದಲ್ಲಿ ರಕ್ತದ ಶಿಬಿರ ಹಾಗೂ ರಕ್ತದಾನದ ಕುರಿತು ಜಾಗೃತಿ ಮೂಡಿಸಬೇಕು. ಹಿಮೋಗ್ಲೊಬಿನ್ ಪ್ರಮಾಣ 12 ಗ್ರಾಂ ಗಿಂತ ಹೆಚ್ಚಿರುವವರು ಸ್ವಯಂ ಪ್ರೇರಿತರಾಗಿ ರಕ್ತದಾನ ಮಾಡಬಹುದು ಎಂದರು.

ಇತ್ತೀಚಿನ ದಿನಗಳಲ್ಲಿ ಅಪಘಾತ ಹಾಗೂ ಮಹಿಳೆಯರ ಹೆರಿಗೆ ಸಂದರ್ಭದಲ್ಲಿ ರಕ್ತದ ಅವಶ್ಯಕತೆ ಹೆಚ್ಚಾಗಿರುವುದರಿಂದ ಜನರು ವರ್ಷಕ್ಕೆ ಒಮ್ಮೆಯಾದರೂ ರಕ್ತದಾನ ಮಾಡಿ ಜೀವ ಉಳಿಸುವಲ್ಲಿ ಸಹಕಾರಿಯಾಗಬೇಕು ಎಂದರು.

ಇದೇ ಸಂದರ್ಭದಲ್ಲಿ ಸ್ವಯಂ ಪ್ರೇರಿತರಾಗಿ ಅತಿ ಹೆಚ್ಚು ಬಾರಿ ರಕ್ತದಾನ ಮಾಡಿದ ದಾನಿಗಳಿಗೆ ಪ್ರಶಸ್ತಿ ಪತ್ರ ನೀಡಿ ಸನ್ಮಾನಿಸಲಾಯಿತು.

ಜಾಗೃತಿ ಜಾಥಾ: ರಾಷ್ಟ್ರೀಯ ಸ್ವಯಂ ಪ್ರೇರಿತ ರಕ್ತದಾನ ದಿನಾಚರಣೆಯ ಅಂಗವಾಗಿ ರಕ್ತದಾನ ಜಾಗೃತಿ ಜಾಥಾಗೆ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ. ಎಸ್ ಷಣ್ಮುಖಪ್ಪ ಹಸಿರು ನಿಶಾನೆ ತೋರಿಸುವ ಮೂಲಕ ಚಾಲನೆ ನೀಡಿದರು. ರಕ್ತದಾನ ಮಹಾದಾನ, ರಕ್ತದಾನ ಜೀವದಾನ, ರಕ್ತದಾನ ಮಾಡಿ ಜೀವ ಉಳಿಸಿ ಎಂಬ ಘೋಷ ವಾಕ್ಯದೊಂದಿಗೆ ಜಾತವು ಚಿಗಟೇರಿ ಜಿಲ್ಲಾ ಆಸ್ಪತ್ರೆಯಿಂದ ವಿದ್ಯಾರ್ಥಿ ಭವನ, ಅಂಬೇಡ್ಕರ್ ಸರ್ಕಲ್ ಹಾಗೂ ಎ.ವಿ.ಕೆ ರಸ್ತೆಯ ಮೂಲಕ ಸಾಗಿತು.

ಚಿಗಟೇರಿ ಜಿಲ್ಲಾ ಆಸ್ಪತ್ರೆಯ ಅಧೀಕ್ಷಕ ಡಾ. ನಾಗೇಂದ್ರಪ್ಪ ಎಂ ಬಿ, ಜಿಲ್ಲಾಸ್ಪತ್ರೆಯ ನಿವಾಸಿ ವೈದ್ಯಾಧಿಕಾರಿ ಡಾ. ಎಸ್. ಕೆ ನಾಗವೇಣಿ, ರವರ ಜಿಲ್ಲಾ ಕಾರ್ಯಕ್ರಮ ಅಧಿಕಾರಿ ಡಾ. ನಟರಾಜ, ಚಿಗಟೇರಿ ಜಿಲ್ಲಾ ಆಸ್ಪತ್ರೆಯ ರಕ್ತ ಭಂಡಾರದ ವೈದ್ಯಾಧಿಕಾರಿ ಡಾಕ್ಟರ್ ಗೀತಾ ಡಿ.ಹೆಚ್, ಡಾ. ಬಾರ್ಕಿ, ಮಂಜುನಾಥ್ ಪಾಟೀಲ್ ಉಪಸ್ಥಿತರಿದ್ದರು.

ಜೀವನದ ಸವಾಲು ಎದುರಿಸಲು ಶಿಕ್ಷಣ ಅಗತ್ಯ: ಅರುಣ್‌ಕುಮಾರ್

» ದಾವಣಗೆರೆ

ಜೀವನದ ಸವಾಲುಗಳನ್ನು ಎದುರಿಸಲು ಮತ್ತು ಅವಕಾಶಗಳ ಮೂಲಕ ಅಭಿವೃದ್ಧಿ ಹೊಂದಲು ವ್ಯಕ್ತಿಗಳನ್ನು ಸಶಕ್ತಗೊಳಿಸಲು ಶಿಕ್ಷಣ ಅವಶ್ಯಕವಾಗಿದೆ ಎಂದು ದಾವಣಗೆರೆ ಜಿಲ್ಲಾ ವಕೀಲರ ಸಂಘದ ಅಧ್ಯಕ್ಷ ಎಲ್.ಹೆಚ್.ಅರುಣ್‌ಕುಮಾರ್ ಅಭಿಪ್ರಾಯಪಟ್ಟರು.

ನಗರದ ಪಿ.ಜೆ.ಬಡಾವಣೆಯ ವನಿತಾ ಸಮಾಜದಲ್ಲಿ ಕರ್ನಾಟಕ ವಿದ್ಯಾರ್ಥಿ ಸಂಘಟನೆಯು ಎಸ್‌ಎಸ್‌ಎಲ್‌ಸಿ ಮತ್ತು ಪಿಯುಸಿ ಪರೀಕ್ಷೆಯಲ್ಲಿ ಉತ್ತೀರ್ಣರಾದ ಕಾರ್ಮಿಕರ ಮಕ್ಕಳಿಗಾಗಿ ಆಯೋಜಿಸಲಾಗಿದ್ದ 6ನೇ ವರ್ಷದ ಅಭಿನಂದನಾ ಸಮಾರಂಭದಲ್ಲಿ ಭಗತ್‌ಸಿಂಗ್ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡುವ ಮೂಲಕ ಉದ್ಘಾಟಿಸಿ ಮಾತನಾಡಿದರು.ವಿಮರ್ಶಾತ್ಮಕ ಚಿಂತನೆ, ಸೃಜನಶೀಲತೆ ಮತ್ತು ನಿರಂತರ ಬೆಳವಣಿಗೆಯನ್ನು ಉತ್ತೇಜಿಸುವ ಪ್ರಜ್ಞೆಯನ್ನು ಶಿಕ್ಷಣ ನೀಡುತ್ತದೆ. ಸಂವಿಧಾನದ ಅಡಿಯಲ್ಲಿ ಶಿಕ್ಷಣ ಮೂಲಭೂತ ಹಕ್ಕು ಘೋಷಿಸಿದ್ದರೂ ಸಹ ಇಂದಿಗೂ ಶಿಕ್ಷಣ ವಂಚಿತರನ್ನು ನಾವು ನೋಡುತ್ತಿದ್ದೇವೆ. ಸಮಾಜದ ಕಟ್ಟಕಡೆಯ ವ್ಯಕ್ತಿ ಕೂಡ ಶಿಕ್ಷಣ ಪಡೆಯುವ ಅವಕಾಶ ಕಲ್ಪಿಸುವುದು ಸರ್ಕಾರಗಳ ಜವಾಬ್ದಾರಿ ಆಗಿದೆ. ಆದರೆ, ಇಂದು ಶಿಕ್ಷಣ ಮತ್ತು ಆರೋಗ್ಯ ವ್ಯಾಪಾರೀಕರಣಗೊಂಡು ಬಡವರಿಗೆ ನಿಲುಕದ ಸ್ಥಿತಿಗೆ ತಲುಪಿಸುವುದು ಅತ್ಯಂತ ವಿಷಾಧನೀಯ ಎಂದು ಹೇಳಿದರು. ಒಂದೆಡೆ ಸರ್ಕಾರಿ ಶಿಕ್ಷಣ ಸಂಸ್ಥೆಗಳನ್ನು ಮುಚ್ಚಲಾಗುತ್ತಿದೆ. ಇನ್ನೊಂದೆಡೆ ಖಾಸಗಿ ಶಿಕ್ಷಣ ಸಂಸ್ಥೆಗಳು ಹೆಚ್ಚಾಗುತ್ತಿದ್ದು, ಬಡವರಿಗೆ ಉತ್ತಮ ಶಿಕ್ಷಣ ಮರೀಚಿಕೆ ಆಗಿದೆ. ಜಾತಿ, ಮತ, ಧರ್ಮ, ಲಿಂಗಬೇಧಗಳನ್ನು ಮೀರಿ ಆಲೋಚಿಸುವ ಶಿಕ್ಷಣ ನೀಡುವುದು ಇಂದಿನ ಅಗತ್ಯವಾಗಿದೆ ಎಂದರು.ಅತಿಥಿಗಳಾಗಿ ಆಗಮಿಸಿದ್ದ ಪ್ರೊಫೆಷನಲ್ ಸೋಶಿಯಲ್ ವರ್ಕ್ ಅಸೋಸಿಯೇಷನ್‌ನ ಅಧ್ಯಕ್ಷ ಡಾ.ಎಂ.ಸಂತೋಷ್